ಸಂಪುಟ : 9 ಸಂಚಿಕೆ 59 ಪುಟ : 4 ಬೆಲೆ: 3.00 ಗುರುವಾರ ಏಪ್ರಿಲ್ 4 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 59 Pages : 4 Price : 3.00 Thursday April 4 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕಾದು ಕೆಂಡವಾದ ವಾತಾವರಣ । ಮೂಕ ಪ್ರಾಣಿಗಳಿಗೆ ನೀರು-ಆಹಾರ ಒದಗಿಸಿ ಮಾದರಿಯಾದ ವಿದ್ಯಾರ್ಥಿಗಳು

# ಮೂಕ ಜೀವಿಗಳಿಗೆ ಮಿಡಿದ ಮನಗಳು



**■ವಿಜಯಸಾಕ್ಷಿ ಸುದ್ದಿ, ಗದಗ**

ಎಲ್ಲಿ ನೋಡಿದರಲ್ಲಿ ಬೇಸಿಗೆಯ ಬೇಗೆ ಹೆಚ್ಚುತ್ತಲೇ ಇದೆ. ಕೆಂಡದಂಥ ಬಿಸಿಲಿನ ಝಳಕ್ಕೆ ರಾಜ್ಯದ ಜನ ಹೈರಾಣಾಗುತ್ತಿದ್ದಾರೆ. ನೀರಿನ ಕೊರತೆ ಒಂದೆಡೆ ಸಂಕಷ್ಟ ತಂದೊಡ್ಡುತ್ತಿದ್ದ-ರೆ, ಬೆಳಿಗ್ಗೆ 10ರ ನಂತರ ಹೊರಗೆಲ್ಲೂ ತಲೆಯೆತ್ತಿ ಓಡಾಡಲೂ ಆಗದಂತ ಪರಿಸ್ಥಿತಿ ಎದುರಾಗಿದೆ. ಸಾಕ್ಷಾತ್ತು ಕಾವಲಿಯ ಮೇಲೆ ಕೂತ ಅನುಭವವಾಗುತ್ತಿದೆ. ಅಭಿವೃದ್ಧಿಯ ನಾಗಾಲೋಟದಲ್ಲಿರುವ ಮನುಷ್ಯ ಈ ಎಲ್ಲವುಗಳಿಗೂ ಏನಾದರೊಂದು ತಾತ್ಕಾಲಿಕ ಪರಿಹಾರ ಹುಡುಕಿಬಿಡಬಲ್ಲ. ಆದರೆ, ಮೂಕ ಪ್ರಾಣಿ-ಪಕ್ಷಿಗಳ ಪಾಡು ಹೇಳತೀರದು.

ಇಂತಹ ಪರಿಸ್ಥಿತಿಯಲ್ಲಿ ಮೂಕ ಜೀವಿಗಳ ಸಂಕಷ್ಟಕ್ಕೆ ಮಿಡಿದ ಮನಗಳು ಇಂತಹ ಪ್ರಾಣಿ-ಪಕ್ಷಿಗಳ ದಾಹ ನೀಗಿಸಲು ಮುಂದಾಗಿವೆ. ಕಾಲೇಜು ಆವರಣ, ಮನೆ ಅಂಗಳ, ಮಾಳಿಗೆಗಳ ಮೇಲೆ ಪಕ್ಷಿಗಳಿಗೆ ನೀರು, ಕಾಳು ಇಡುವ ಮೂಲಕ ಮೂಕ ಜೀವಿಗಳ ಸಂಕುಲಕ್ಕೆ ನೆರವಾಗಿ, ಮಾನವೀಯತೆ ತೋರಿದ್ದಾರೆ. ವಿದ್ಯಾರ್ಥಿಗಳ ಈ ಕಾರ್ಯಕ್ಕೆ ಅವಳಿ ನಗರದಲ್ಲಿ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ.

ಗದಗ ನಗರದ ಗ್ರಾಮೀಣ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಇಂತದೊಂದು ಕಾರ್ಯಕ್ಕೆ ಮುಂದಾಗಿದ್ದಾರೆ. ಏಪ್ರಿಲ್ ತಿಂಗಳ ಮೊದಲ ದಿನ ಎಲ್ಲರೂ ಏಪ್ರಿಲ್ ಫೂಲ್ ಮಾಡುವಲ್ಲಿ ನಿರತರಾಗಿದ್ದರೆ, ಈ ಪರಿಸರ ಕಾಳಜಿಯ ವಿದ್ಯಾರ್ಥಿಗಳು ಮಾತ್ರ ಪ್ರಾಣಿ-ಪಕ್ಷಿಗಳಿಗೆ ಆಹಾರ, ನೀರು ಹಾಕುವ ಮೂಲಕ 'ಏಪ್ರಿಲ್ ಕೂಲ್ ಡೇ' ಆಚರಣೆ ಮಾಡುವ ಮೂಲಕ ಒಳ್ಳೆಯ ಸಂದೇಶವನ್ನೇ ನೀಡಿದ್ದಾರೆ. ವಿದ್ಯಾರ್ಥಿಗಳು ಸ್ವಂತ ಖರ್ಚಿನಲ್ಲಿ ಮಣ್ಣಿನ ಮಡಿಕೆ, ವಿವಿಧ ನಮೂನೆಯ ಕಾಳುಗಳನ್ನು ಖರೀದಿಸಿ, ವಿಶ್ವ ವಿದ್ಯಾಲಯದ ಆವರಣದಲ್ಲಿ ಅಲ್ಲಲ್ಲಿ ನೀರು, ಕಾಳುಗಳನ್ನು ಇಡುವ ಮೂಲಕ ಪ್ರಾಣಿ, ಪಕ್ಷಿಗಳ ಹಸಿವು, ದಾಹ ನೀಗಿಸಿದರು.

ವಿಶ್ವವಿದಾಯಲಯದ ಆವರಣದಲ್ಲಷ್ಟೇ ಅಲ್ಲದೆ, ತಮ್ಮ ತಮ್ಮ ಮನೆಯ ಅಂಗಳ, ಮಾಳಿಗೆ ಮೇಲೂ ಆಹಾರ, ನೀರು ಇಡುವ ಮೂಲಕ ಮಾನವೀಯತ ತೋರಿದ್ದಾರೆ. ಈ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಕಳೆದ 2-3 ವರ್ಷಗಳಿಂದಲೂ ಸದ್ದಿಲ್ಲದೇ ಈ ಕಾರ್ಯ ಮಾಡುತ್ತಿದ್ದಾರೆ.

ವಿಶ್ವ ವಿದ್ಯಾಲಯದ ಆವರಣದಲ್ಲಿ ನಿತ್ಯ ಬೆಳಗ್ಗೆ ಹಾಗೂ ಸಂಜೆಯ ಸಮಯದಲ್ಲಿ ವಿದ್ಯಾರ್ಥಿಗಳು ತಂಡ ತಂಡವಾಗಿ ಹೋಗಿ ಕಾಳು, ನೀರು ಹಾಕಿ ಪ್ರಾಣಿ-ಪಕ್ಷಿಗಳಿಗೆ ಅನಕೂಲ ಆಗುವ ಜಾಗದಲ್ಲಿ ಇಡುತ್ತಾರೆ. ಬಳಿಕ ಪ್ರಾಣಿ, ಪಕ್ಷಿಗಳು ಬಂದು ವಿದ್ಯಾರ್ಥಿಗಳು ಹಾಕಿದ ಆಹಾರ ತಿಂದು, ನೀರು ಕುಡಿದು ಖುಷಿ ಖುಷಿಯಿಂದ ವಾಪಸ್ಸಾಗುವ ದೃಶ್ಯ ಎಂತವರ ಮನಸ್ಸಿಗೂ ಖುಷಿ ನೀಡುವಂತಿವೆ.





ನಾವು ಮನುಷ್ಯರಿಗೇನು ಬಿಡಿ, ಪ್ರತಿಯೊಂದು ಸಮಸ್ಯೆಗೂ ಒಂದಿಲ್ಲೊಂದು ಪರಿಹಾರ ಕಂಡುಕೊಳ್ಳುತ್ತೇವೆ. ಆದರೆ, ಮಾತು ಬಾರದ ಈ ಪ್ರಾಣಿ-ಪಕ್ಷಿಗಳು ಇಂತಹ ಬಿರು ಬೇಸಿಗೆಯನ್ನು ಹೇಗೆ ಎದುರಿಸಿಯಾವು? ಕೆರೆ-ಕಟ್ಟೆಗಳಲ್ಲಿ ಮೊದಲಿನಂತೆ ನೀರು ಸಿಗುತ್ತಿಲ್ಲ. ಹೊಲಗಳಲ್ಲಿ ಬೆಳೆಗಳೆಲ್ಲವೂ ಒಣಗಿಹೋಗಿದ್ದು, ಆಹಾರವೂ ಸಿಗದೆ ಪರದಾಡುವಂತಾಗಿದೆ. ಹೀಗಿರುವಾಗ, ಮನುಷ್ಯರೆನಿಸಿಕೊಂಡ ನಾವು, ಈ ಮೂಕ ಜೀವಿಗಳಿಗೆ ಕೈಲಾದಷ್ಟು ನೀರು, ಆಹಾರ ನೀಡಿ ನೆರವಾಗುವುದೇ ನಿಜವಾದ ಮನುಷ್ಯತ್ವ ಎನಿಸಿಕೊಳ್ಳುತ್ತದೆ. ಆ ಜೀವಿಗಳ ಸಂತೋಷ ವರ್ಣಿಸಲಾಗದ ನೆಮ್ಮದಿ ನೀಡುತ್ತದೆ ಎನ್ನುತ್ತಾರೆ ವಿದ್ಯಾರ್ಥಿಗಳು.

## ಚುನಾವಣಾ ವೆಚ್ಚದ ಮೇಲೆ ಕಣ್ಗಾವಲಿಡಲು ವಿಶೇಷ ಅಧಿಕಾರಿ ನೇಮಕ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಚುನಾವಣಾ ವೆಚ್ಚ ಮೇಲೆ ಕಣ್ಗಾವಲಿಡಲು ಭಾರತೀಯ ಕಂದಾಯ ಸೇವೆ ಅಧಿಕಾರಿ ಬಿ ಮುರಳಿ ಕುಮಾರ್ ಅವರನ್ನು ವಿಶೇಷ ಅಧಿಕಾರಿಯಾಗಿ ಭಾರತೀಯ ಚುನಾವಣಾ ಆಯೋಗ (ಇಸಿಐ) ಮಂಗಳವಾರ ನೇಮಕ ಮಾಡಿದೆ.

ಅಸ್ತಿತ್ವದಲ್ಲಿರುವ ಚುನಾವಣಾ ವೆಚ್ಚದ ಮೇಲ್ವಿಚಾರಣೆಯನ್ನು ಬಲಪಡಿಸಲು ವೀಕ್ಷಕರನ್ನು ನೇಮಿಸಲಾಗಿದೆ ಎಂದು ಚುನಾವಣಾ ಆಯೋಗ ಹೇಳಿದೆ.

ಕರ್ನಾಟಕವಷ್ಟೇ ಅಲ್ಲದೆ, ಆಂಧ್ರಪ್ರದೇಶ, ಒಡಿಶಾ, ತಮಿಳುನಾಡು ಮತ್ತು ಉತ್ತರ ಪ್ರದೇಶಗಳಿಗೂ ವಿಶೇಷ ಅಧಿಕಾರಿಯನ್ನು ನೇಮಿಸಲಾಗಿದೆ. 2019ಕ್ಕೆ ಹೋಲಿಸಿದರೆ 2024 ರ ಲೋಕಸಭೆ ಚುನಾವಣೆಗೆ ಚುನಾವಣಾ ನೀತಿ ಸಂಹಿತೆ (ಒಅಅ) ಜಾರಿಯಾದ ಕೇವಲ 10 ದಿನಗಳಲ್ಲಿ ವಶಪಡಿಸಿಕೊಳ್ಳುವುತ್ತಿರುವುದು ಶೇ.110.12ರಷ್ಟು ಹೆಚ್ಚಾಗಿದೆ ಎಂದು ಕರ್ನಾಟಕ ಮುಖ್ಯ ಚುನಾವಣಾ ಅಧಿಕಾರಿ (ಅಇಔ) ಕಚೇರಿ ಮಾಹಿತಿ ನೀಡಿದೆ.

ಮಾರ್ಚ್ 16, 2024 ರಿಂದ ಮಾರ್ಚ್ 27, 2024 ರವರೆಗೆ 55.76 ಕೋಟಿ ರೂ ನಗದು ಹಾಗೂ ಬೆಲೆಬಾಳುವ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಳೆದ ಆರು ತಿಂಗಳ ಹಿಂದೆ ಎಂಸಿಸಿ, ಪೊಲೀಸರು, ಆದಾಯ ತೆರಿಗೆ, ಅಬಕಾರಿ, ವಾಣಿಜ್ಯ ತೆರಿಗೆ, ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ ಮತ್ತು ಡಿಆರ್‌ಐ 537.51 ಕೋಟಿ ರೂಪಾಯಿ ಮೌಲ್ಯದ ನಗದು ಮತ್ತು ವಸ್ತುಗಳನ್ನು ವಶಪಡಿಸಿಕೊಂಡಿದ್ದರು. ಏಪ್ರಿಲ್ 2, 2024 ರವರೆಗೆ 81,10,26,256 ರೂ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆಂದು ವರದಿಗಳಿಂದ ತಿಳಿದುಬಂದಿದೆ.

### ಡಾ. ಬಾಬು ಜಗಜೀವನರಾಮ್‌ರ ಪುತ್ಥಳಿ ಸ್ಥಾಪಿಸಿ, ನಾಮಕರಣ ಮಾಡಿ

# ಸಚಿವ ಎಚ್.ಕೆ. ಪಾಟೀಲರಿಗೆ ಮನವಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್‌ರವರ 117ನೇ ಜಯಂತಿ ಅಂಗವಾಗಿ ಗದಗ ನಗರದ ಸರ್ಕಲ್‌ವೊಂದರಲ್ಲಿ ಡಾ. ಬಾಬು ಜಗಜೀವನರಾಮ್‌ರವರ ಪುತ್ಥಳಿ ಸ್ಥಾಪಿಸಿ ನಾಮಕರಣ ಮಾಡುವಂತೆ ಡಾ. ಬಾಬಾಸಾಹೇಬ ಅಂಬೇಡ್ಕರ ಹಾಗೂ ಡಾ. ಜಗಜೀವನರಾಮ ಸಮಾನತೆ ಸಮಿತಿ ಗದಗ ಸಂಚಾಲಕ ಯುವರಾಜ ಬಳ್ಳಾರಿಯವರು ಕಾನೂನು, ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ಯುವರಾಜ ಬಳ್ಳಾರಿ, ಭಾರತದ ಉಪಪ್ರಧಾನಿಯಾಗಿ, ದಲಿತರ ಧ್ವನಿಯಾಗಿ, ದೇಶದಲ್ಲಿ ಹಸಿರು ಕ್ರಾಂತಿಯ ಹರಿಕಾರ ಎಂಬ ಹೆಸರನ್ನು ಡಾ. ಬಾಬು ಜಗಜೀವನರಾಮರು ಗಳಿಸಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರಾಗಿದ್ದಾಗ ಹಿಂದಿನ ಸರ್ಕಾರದಲ್ಲಿ ಗದಗ-ಬೆಟಗೇರಿ ನಗರದ ವಾರ್ಡ್ ನಂ. 16ರಲ್ಲಿ ನಗರಸಭೆ ಸದಸ್ಯರಾದ ಕೃಷ್ಣಾ ಪರಾಪೂರರ ಮನವಿಯ ಮೇರೆಗೆ ಡಾ. ಬಾಬು ಜಗಜೀವನರಾಮ್ ಇವರ ಹೆಸರಿನಲ್ಲಿ ಸಮುದಾಯ ಭವನ ನಿರ್ಮಾಣ ಮಾಡಿದ್ದಾರೆ.



ಇದೇ ತಿಂಗಳು 5ರಂದು ಡಾ. ಬಾಬು ಜಗಜೀವನರಾಮ ಇವರ ಜಯಂತಿಯಿದ್ದು, ಈ ದಿನದಂದು ಅವರ ಭಾವಚಿತ್ರವನ್ನು ಇಟ್ಟು ಅವರ ಜಯಂತಿ ಆಚರಿಸುತ್ತಾ ಬಂದಿದ್ದೇವೆ. ಇಂತಹ ಮಹಾನ್ ವ್ಯಕ್ತಿಯ ಹೆಸರಿನಲ್ಲಿ ಗದಗ-ಬೆಟಗೇರಿ ನಗರದ ಪ್ರಮುಖ ಸರ್ಕಲ್‌ವೊಂದರಲ್ಲಿ ಪುತ್ಥಳಿ ನಿರ್ಮಾಣ ಮಾಡಿ ಡಾ. ಬಾಬು ಜಗಜೀವನರಾಮ್ ಸರ್ಕಲ್ ಎಂದು ನಾಮಕರಣ ಮಾಡಬೇಕೆಂದು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ದಲಿತ ಮುಖಂಡರಾದ ಎಸ್.ಎನ್. ಬಳ್ಳಾರಿ, ಬಾಲರಾಜ ಅರಬರ, ಗೋವಿಂದರಾಜ ಬಳ್ಳಾರಿ, ಸಯ್ಯದಖಾಲಿದ ಕೊಪ್ಪಳ, ಮಾರುತಿ ಗುಡಿಮನಿ, ಮಹೇಶ ನಾನ್‌ಬಲ್, ಸುಂಕಪ್ಪ ಗುತ್ತಿ, ನಾಗರಜ ಕಿನ್ನಾರ ಉಪಸ್ಥಿತರಿದ್ದರು.

ಮನವಿ ಸ್ವೀಕರಿಸಿದ ಸಚಿವ ಡಾ. ಎಚ್.ಕೆ. ಪಾಟೀಲ, ಮುಂಬರುವ ದಿನಮಾನಗಳಲ್ಲಿ ಡಾ. ಬಾಬು ಜಗಜೀವನರಾಮ್ ಅವರ ಪುತ್ಥಳಿಯನ್ನು ನಗರದ ಪ್ರಮುಖ ಸರ್ಕಲ್‌ನಲ್ಲಿ ಸ್ಥಾಪಿಸಿ, ಅವರ ಹೆಸರನ್ನು ನಾಮಕರಣ ಮಾಡುವುದಾಗಿ ಭರವಸೆ ನೀಡಿದರು.

## ಪೌರಕಾರ್ಮಿಕರು ಸುರಕ್ಷತೆ ಕಾಯ್ದುಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಜನರ ಆರೋಗ್ಯ ಮತ್ತು ಸ್ವಚ್ಛತೆಯನ್ನು ಕಾಪಾಡುವ ಕಾರ್ಯವನ್ನು ಪೌರಕಾರ್ಮಿಕರು ಮಾಡುತ್ತಿದ್ದು, ಪೌರಕಾರ್ಮಿಕರು ಸಹ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಕೆಲಸದ ವೇಳೆಯಲ್ಲಿ ಸುರಕ್ಷಾ ಪರಿಕರಗಳನ್ನು ಧರಿಸಿ ಕೆಲಸ ನಿರ್ವಹಿಸುವದು ಅವಶ್ಯವಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಹೇಳಿದರು.

ಅವರು ಬುಧವಾರ ಪಟ್ಟಣದ ಪುರಸಭೆಯಲ್ಲಿ ಪೌರಕಾರ್ಮಿಕರಿಗೆ ಸುರಕ್ಷಾ ಪರಿಕರಗಳನ್ನು ವಿತರಿಸಿ ಮಾತನಾಡಿದರು.

ಪೌರಕಾರ್ಮಿಕರು ಸುರಕ್ಷಾ ಪರಿಕರಗಳನ್ನು ಧರಿಸಿ ಪ್ರತಿನಿತ್ಯ ಕರ್ತವ್ಯ ನಿರ್ವಹಿಸುವುದು ಕಡ್ಡಾಯವಾಗಿದ್ದು, ನೀವು ಆರೋಗ್ಯವಾಗಿದ್ದರೆ ಮಾತ್ರ ಪಟ್ಟಣದ ಜನರು ಆರೋಗ್ಯವಾಗಿರಲು ಸಾಧ್ಯವಾಗುತ್ತದೆ. ಪೌರಕಾರ್ಮಿಕರು ತಮ್ಮ ಆರೋಗ್ಯವನ್ನು ಲೆಕ್ಕಿಸದೆ ನಿರಂತರ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ. ಸೇವಾ ಭಾವದಿಂದ ಕೆಲಸ ನಿರ್ವಹಿಸುವ ಪೌರಕಾರ್ಮಿಕರಿಗೆ ಜನರು ಸಹಕಾರ ನೀಡುವದು ಅಗತ್ಯವಾಗಿದೆ. ಪರಿಕರಗಳನ್ನು ಉಪಯೋಗಿಸದೆ ಇದ್ದವರನ್ನು ಗೈರು ಹಾಜರಿ ಎಂದು ಪರಿಗಣಿಸಲಾಗುತ್ತದೆ ಎಂದು ಪೌರಕಾರ್ಮಿಕರಿಗೆ ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಬಸವರಾಜ ಓದುನವರ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಅರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಶಿವಣ್ಣ ಮ್ಯಾಗೇರಿ, ಬಸವಣೆಪ್ಪ ನಂದೆಣ್ಣನವರ, ಹನುಮಂತಪ್ಪ ನಂದೆಣ್ಣನವರ, ನಿಂಬಯ್ಯನಮಠ, ನೇತ್ರಾ ಹೊಸಮನಿ, ಉಮಾ ಬೆಳವಿಗಿ, ಪುರಸಭೆ ಸಿಬ್ಬಂದಿಗಳು, ಪೌರಕಾರ್ಮಿಕರು ಇದ್ದರು.

### ಬೀದಿ ಬದಿ ವ್ಯಾಪಾರಿಗಳ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಪ್ರತಿಭಟನೆ

# ಬೀದಿಬದಿ ವ್ಯಾಪಾರಿಗಳಿಂದ ಶುಲ್ಕ ಪಡೆಯುವಂತಿಲ್ಲ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಪುರಸಭೆ ಎದುರು ಬುಧವಾರ ಬೀದಿ ಬದಿ ವ್ಯಾಪಾರಸ್ಥರ ವಿವಿಧೋದ್ದೇಶಗಳ ಸಂಘದ ತಾಲೂಕ ಘಟಕದಿಂದ ನೂರಾರು ಬೀದಿ ಬದಿ ವ್ಯಾಪಾರಿಗಳು ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿದರು. ಚುನಾವಣಾ ಕಾರ್ಯ ನಿಮಿತ್ತ ತೆರಳಿದ್ದ ಪುರಸಭೆ ಮುಖ್ಯಾಧಿಕಾರಿಗಳು ಸ್ಥಳಕ್ಕೆ ಬರಲು ವಿಳಂಬವಾದ ಹಿನ್ನೆಲೆಯಲ್ಲಿ ಪುರಸಭೆ ಗೇಟ್ ಎದುರಿನಲ್ಲಿ ಪ್ರತಿಭಟನೆಯನ್ನು ನಡೆಸಿ ಧಿಕ್ಕಾರ ಕೂಗಿದರು.

ಸ್ಥಳಕ್ಕೆ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಆಗಮಿಸುತ್ತಿದ್ದಂತೆಯೇ ಬೀದಿಬದಿ ವ್ಯಾಪಾಸ್ಥರ ಸಂಘದ ಜಿಲ್ಲಾಧ್ಯಕ್ಷ ಭಾಷಾಸಾಬ ಮಲ್ಲಸಮುದ್ರ ಮತ್ತು ತಾಲೂಕಾಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ ಮಾತನಾಡಿ, ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಬೀದಿ ಬದಿ ವ್ಯಾಪಾರಿಗಳಿಂದ ದಿನಕ್ಕೆ ನಿಗದಿಪಡಿಸಿದ ಶುಲ್ಕವನ್ನು ವಸೂಲಿ ಮಾಡಲಾಗುತ್ತಿದೆ. ಆದರೆ ಜಿಲ್ಲಾಡಳಿತದ ಆದೇಶದ ಪ್ರಕಾರ ಬೀದಿಬದಿ ವ್ಯಾಪಾರಿಗಳಿಂದ ಯಾವುದೇ ಶುಲ್ಕ ಪಡೆಯುವಂತಿಲ್ಲ. ಒಂದು ವೇಳೆ ಪಡೆದಿದ್ದರೂ ಅವರಿಂದ ಸಂಗ್ರಹಿಸಿದ ಪ್ರತಿದಿನದ ಶುಲ್ಕದ ಸಂಗ್ರಹಣೆಯನ್ನು ಪಟ್ಟಣ ಮಾರಾಟ ಸಮಿತಿಯ(ಟಿವಿಸಿ) ಖಾತೆಗೆ ವರ್ಗಾವಣೆ ಮಾಡಬೇಕು ಎಂದು ಆದೇಶವಿದೆ. ಅದನ್ನು ಪುರಸಭೆಯವರು ಪಾಲಿಸುತ್ತಿಲ್ಲ.

ಅಲ್ಲದೆ ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ಇದ್ದರೂ ಅಂತವರಿಂದಲೂ ಶುಲ್ಕ ಸಂಗ್ರಹಿಸುತ್ತಿರುವದು ಮತ್ತು ಕೆಲವು ಕಡೆಗಳಲ್ಲಿ ಹೆಚ್ಚು ಶುಲ್ಕವನ್ನು ಸಂಗ್ರಹಿಸುತ್ತಿರುವದು ಕಂಡು ಬಂದಿದೆ. ಇದರ ಬಗ್ಗೆ ಸರಿಯಾಗಿ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಿ ಎಂದು ಆಗ್ರಹಿಸಿದರಲ್ಲದೆ, ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡಬೇಕು. ಯಾವುದೇ ದಿನದ ಕರ, ನೆಲಬಾಡಿಗೆ ಇನ್ನಿತರೆ ಶುಲ್ಕ ವಸೂಲಿ ಮಾಡಬಾರದು. ಸಂಗ್ರಹಿಸಿದ್ದೇ ಆದಲ್ಲಿ ಸಂಗ್ರಹಿಸಿದ ಶುಲ್ಕವನ್ನು ಪಟ್ಟಣದ ಮಾರಾಟ ಸಮಿತಿ ಖಾತೆಗೆ ವರ್ಗಾವಣೆ ಮಾಡಿ ರಾಷ್ಟ್ರೀಯ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹೊರಡಿಸಿರುವ ಆದೇಶದಂತೆ ಬೀದಿ ಬದಿ ವ್ಯಾಪಾರಿಗಳ ಸಂರಕ್ಷಣೆ, ಹಿತರಕ್ಷಣೆಗೆ ಬಳಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಮುನೀರಸಾಬ ಸಿದ್ದಾಪೂರ, ಹನುಮಂತಪ್ಪ ರಾಮಗೇರಿ, ದಾದಾಪೀರ ಬೆಂಡಿಗೇರಿ, ಮಂಜುನಾಥ ಬಸಾಪೂರ, ಪರಶುರಾಮ ಬಳ್ಳಾರಿ, ಮಹಬೂಬಸಾಬ ಸುಂಡಕೆ, ರಾಜೇಸಾಬ ಮುಲ್ಲಾನವರ, ಲಕ್ಷ್ಮಣ ಮುಳಗುಂದ, ಸೋಮವ್ವ ಬೆಟಗೇರಿ, ಶಬ್ಬೀರ ಅಹ್ಮದ ಶಿರಹಟ್ಟಿ ಮುಂತಾದವರಿದ್ದರು.



ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ, ಶುಲ್ಕ ಸಂಗ್ರಹಣೆ ಹಣವನ್ನು ಪಟ್ಟಣ ಮಾರಾಟ ಸಮಿತಿಯ ಖಾತೆಗೆ ಜಮಾ ಮಾಡಲಾಗುತ್ತಿದೆ ಮತ್ತು ವ್ಯಾಪಾರಸ್ಥರಿಗೆ ಸಲ್ಲಬೇಕಾದ ಸೌಲಭ್ಯಗಳನ್ನು ತಲುಪುವಂತೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

## ಸಂಪಾದಕೀಯ

# ಬಿಜೆಪಿ ಸೇರಿದರೆ ಕ್ಲೀನ್ ಚಿಟ್

ದೇಶದ ರಾಜಕಾರಣದಲ್ಲಿ ಹೊಸ ಟ್ರೆಂಡ್ ಒಂದು ಶುರುವಾಗಿದೆ. ಭ್ರಷ್ಟಾಚಾರ ಪ್ರಕರಣದಲ್ಲಿ ಭಾಗಿಯಾದವರು ಒಂದು ವೇಳೆ ಬಿಜೆಪಿ ಸೇರಿದರೆ, ಅವರ ವಿರುದ್ಧದ ಆರೋಪಗಳು ಸಾಬೀತಾಗುವುದಿಲ್ಲ ಅಥವಾ ಅವರಿಗೆ ಕ್ಲೀನ್ ಚಿಟ್ ನೀಡಲಾಗುತ್ತಿದೆ.

ಈ ಟ್ರೆಂಡ್‌ನಿಂದಾಗಿ ದೇಶದಲ್ಲಿ ಅನೇಕ ಭ್ರಷ್ಟ ರಾಜಕಾರಣಿಗಳು ಶಿಸ್ತಿನ ಪಕ್ಷವನ್ನು ಸೇರಿಕೊಳ್ಳುತ್ತಿದ್ದಾರೆ. ವ್ಯಕ್ತಿಗಳು ಮಾತ್ರವಲ್ಲದೇ ಸಣ್ಣ ಪುಟ್ಟ ಪಕ್ಷಗಳು ಬಿಜೆಪಿ ಸೇರಿವೆ. ಸೇರುವ ಪಕ್ಷಗಳು ಮತ್ತು ವ್ಯಕ್ತಿಗಳ ಪಟ್ಟಿ ಇನ್ನು ದೊಡ್ಡದಿದೆ. ಸದ್ಯ ಲೋಕಸಭೆ ಚುನಾವಣೆ ಎದುರಾಗಿರುವುದರಿಂದ ಈ ಟ್ರೆಂಡ್ ಸಾಕಷ್ಟು ಸುದ್ದಿ ಮಾಡುತ್ತಿದೆ.

ದೇಶದ ಪ್ರತಿಷ್ಠಿತ ಮಾಧ್ಯಮ ಸಂಸ್ಥೆಯೊಂದು ನಡೆಸಿದ ಸಮೀಕ್ಷೆಯೊಂದರಲ್ಲಿ ಕಾಂಗ್ರೆಸ್ ಮತ್ತು ವಿಪಕ್ಷಗಳಿಂದ ಬಿಜೆಪಿ ಸೇರಿದ 25 ರಾಜಕಾರಣಿಗಳ ಪೈಕಿ 23 ಜನರ ಮೇಲಿನ ಪ್ರಕರಣಗಳ ತನಿಖೆ ಕೈಬಿಡಲಾಗಿದೆ. ಇದು ಕೇವಲ 10 ವರ್ಷದ ಅವಧಿಯಲ್ಲಿ ಆಗಿರುವ ಬೆಳವಣಿಗೆ. ಇದು ದೊಡ್ಡ ದೊಡ್ಡ ಪ್ರಕರಣದಲ್ಲಿ ಭಾಗಿಯಾದವರು ಕುರಿತಾದ ದತ್ತಾಂಶ ಮಾತ್ರ. ಅಸಲಿಗೆ ಸಣ್ಣ ಪುಟ್ಟ ನಾಯಕರು ಕೇಂದ್ರದ ತನಿಖಾ ಸಂಸ್ಥೆಗಳಿಗೆ ಹೆದರಿ ಬಿಜೆಪಿ ಸೇರಿದ ಸಂಖ್ಯೆ ಯಾವ ಸಮೀಕ್ಷೆಗೂ ನಿಲುಕುವುದಿಲ್ಲ.

ವಿಶೇಷ ಎಂದರೆ ಕಾಂಗ್ರೆಸ್ ಪಕ್ಷದಿಂದಲೇ 10 ಜನ ಬಿಜೆಪಿ ಸೇರಿದ್ದಾರೆ. ಶಿವಸೇನೆ, ತೃಣಮೂಲ ಕಾಂಗ್ರೆಸ್ ನಾಯಕರು ಸಹ ಕೇಂದ್ರದ ತನಿಖಾ ಸಂಸ್ಥೆಗಳಿಗೆ ಹೆದರಿ ಕಮಲ ಪಾರ್ಟಿ ಸೇರಿದ್ದಾರೆ. ವಿಶೇಷ ಎಂದರೆ 6 ಜನ ಲೋಕಸಭೆ ಚುನಾವಣೆಗೂ ಮುನ್ನವೇ ಬಿಜೆಪಿ ಸೇರಿದ್ದಾರೆ.

ಸ್ವತಃ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರೆ, ಯಾವುದೇ ನಾಯಕರು ಕೇಂದ್ರದ ತನಿಖಾ ಸಂಸ್ಥೆಗಳಿಂದ ವಿಚಾರಣೆಗೆ ಒಳಗಾಗಿದ್ದರೆ ಅಂಥವರೂ ಬಿಜೆಪಿ ಸೇರಬಹುದು ಎನ್ನುವ ಮೂಲಕ, ಭ್ರಷ್ಟಾಚಾರಿಗಳಿಗೆ ಬಹಿರಂಗ ಆಹ್ವಾನ ನೀಡಿದ್ದಾರೆ.

ದೇಶದ ಚಿತ್ರಣ ಒಂದೆಡೆಯಾದರೆ, ಕರ್ನಾಟಕದಲ್ಲಿಯೂ ಗಣಿ ಹಗರಣದ ರೂವಾರಿ ಜನಾರ್ಧನ ರೆಡ್ಡಿಯನ್ನೂ ಸಹ ಬಿಜೆಪಿ ತನ್ನ ತೆಕ್ಕೆಗೆ ಎಳೆದುಕೊಂಡಿದೆ. ಒಂದು ಕಡೆ ಪ್ರಧಾನಿ ನರೇಂದ್ರ ಮೋದಿ, ಭ್ರಷ್ಟಾಚಾರವನ್ನು ಸಹಿಸುವುದಿಲ್ಲ ಎಂದು ಗುಡುಗುತ್ತಾರೆ. ಆದರೆ ಪಕ್ಷದಲ್ಲಿ ಭ್ರಷ್ಟಾಚಾರಿಗಳನ್ನು ಮಾತ್ರ ರಕ್ಷಣೆ ಮಾಡುತ್ತಿದ್ದಾರೆ. ಭ್ರಷ್ಟಾಚಾರಿಗಳ ಬೆಂಬಲದಿಂದ ಅಧಿಕಾರ ನಡೆಸುವ ಅನಿವಾರ್ಯತೆ ಬಿಜೆಪಿ ಬಂದಿರುವುದು ಮಾತ್ರ ವಿಪರ್ಯಾಸ.

### ದಿನದ 24 ಗಂಟೆ ಕಾರ್ಯನಿರತ ಜಿಲ್ಲಾ ಮತದಾರರ ಸಹಾಯವಾಣಿ ಕೇಂದ್ರ

# ಸಾರ್ವಜನಿಕರಿಂದ ಉತ್ತಮ ಸ್ಪಂದನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಲೋಕಸಭಾ ಚುನಾವಣೆಗಾಗಿ ಜಿಲ್ಲಾಧಿಕಾರಿಗಳ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾ ಮತದಾರರಿಗಾಗಿ ಸಹಾಯವಾಣಿ ಕೇಂದ್ರವನ್ನು ಮಾರ್ಚ್ 16ರಿಂದ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ. ಮತದಾರರ ಪ್ರತಿ ಕರೆಗೆ ಮಾಹಿತಿಯುಕ್ತ ಪರಿಹಾರ ತಿಳಿಸಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಚುನಾವಣಾ ಕಂಟ್ರೋಲ್ ರೂಮ್‌ನಲ್ಲಿ ಆರಂಭಿಸಲಾಗಿರುವ ಈ ಸಹಾಯವಾಣಿ ಕೇಂದ್ರವು ದಿನದ 24 ಗಂಟೆ ಕಾರ್ಯ ನಿರ್ವಹಿಸುತ್ತಿದೆ. ಸಾರ್ವಜನಿಕರಿಂದ ಕರೆ ಸ್ವೀಕಾರ-ಕ್ಕೆ ಒಟ್ಟು 6 ಸಿಬ್ಬಂದಿಗಳನ್ನು ಪ್ರತಿ 8 ಗಂಟೆಗಳಿಗೆ ಇಬ್ಬರಂತೆ ಕಾರ್ಯನಿರ್ವಹಿಸಲು ನೇಮಿಸಲಾಗಿದೆ. ಈ 6 ಸಿಬ್ಬಂದಿಗಳ ಮೇಲ್ವಿಚಾರಕರನ್ನಾಗಿ ಜಿಲ್ಲಾ ನೋಡಲ್ ಅಧಿಕಾರಿಯಾಗಿ ಕೃಷಿ ವಿವಿಯ ಕುಲಸಚಿವೆ, ಹಿರಿಯ ಕೆಎಎಸ್ ಅಧಿಕಾರಿ ಜಯಲಕ್ಷ್ಮೀ ರಾಯಕೊಡ ಅವರನ್ನು ನೇಮಿಸಲಾಗಿದೆ ಎಂದು ಅವರು ತಿಳಿಸಿದರು.




ಜಿಲ್ಲೆಯ ಸಹಾಯವಾಣಿ ಕೇಂದ್ರಕ್ಕೆ 1950 ಟೋಲ್ ಫ್ರೀ ನಂಬರ್‌ನ ಸೌಕರ್ಯ ಕಲ್ಪಿಸಲಾಗಿದೆ. ಈ ದೂರವಾಣಿಯಲ್ಲಿ PRI(Priority Rate Interface) ಇದ್ದು, ಒಂದೇ ಸಲ ಹಲವು ಕರೆಗಳನ್ನು ಸ್ವೀಕರಿಸುವ ಸಾಮರ್ಥ್ಯ ಹೊಂದಿರುತ್ತದೆ. ಜಿಲ್ಲೆಯ ಸೀಮೆಯೊಳಗೆ ವಾಸಿಸುವ ವ್ಯಕ್ತಿಗಳು ಜಿಲ್ಲೆಯ ಮತದಾರರ ಸಹಾಯವಾಣಿಗೆ ಕರೆ ಮಾಡಲು 1950 ಸಂಖ್ಯೆಯನ್ನು ಡಯಲ್ ಮಾಡಿದರೆ ಸಾಕು. ಲ್ಯಾಂಡಲೈನ್ ಇಲ್ಲವೆ ಯಾವುದೇ ಮೊಬೈಲ್ ಫೋನ್‌ನಿಂದ ಕರೆ ಮಾಡಬಹುದು. ಬೇರೆ ಜಿಲ್ಲೆಗಳಿಂದ ಅಥವಾ ಹೊರರಾಜ್ಯಗಳಿಂದ ಈ ಸಹಾಯವಾಣಿಗೆ ಕರೆ ಮಾಡಬೇಕಾದಲ್ಲಿ ಖಖಿಆ ಕೋಡನ್ನು ಉಪಯೋಗಿಸಿ 1950 ಡಯಲ್ ಮಾಡಬೇಕು.

ಈ ರೀತಿ ಕರೆಗಳ ಜೊತೆ ಚುನಾವಣೆಗೆ ಸಂಬಂಧಿಸಿದ ದೂರುಗಳಿಗೂ ಉತ್ತರಿಸಲಾಗುತ್ತಿದೆ. ಈ ದೂರುಗಳನ್ನು ಎನ್‌ಜಿಆರ್‌ಎಸ್ (ಓಉಖಖ) ಮತ್ತು ಪಿ.ಜಿ.ಆರ್.ಎಸ್ (ಕಉಖಖ) ಪೋರ್ಟಲ್‌ಗಳ ಮೂಲಕ ಸ್ವೀಕೃತಗೊಳ್ಳುತ್ತಿವೆ. ದೂರು ಸ್ವೀಕರಿಸಿದ ನಂತರ 24ರಿಂದ 48 ಗಂಟೆಗಳ ಒಳಗಡೆ ಪ್ರತಿ ದೂರಿಗೆ ಸಂಬಂಧಿತ ಇಲಾಖೆಯಿಂದ ಮಾಹಿತಿ ಪಡೆದು ನಂತರ ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳ ಸ್ಪಷ್ಟ ಅಭಿಪ್ರಾಯದೊಂದಿಗೆ ಚುನಾವಣಾ ಆಯೋಗದ ಈಮೇಲ್ ಛಿಟಛಿ.ಛಿಜಠ.ಜಿ@ರಟಚುಟ.ಛಿಠಟ ಗೆ ಸಲ್ಲಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಸಾರ್ವಜನಿಕರಿಂದ ಮಾಹಿತಿ ಕೇಳಿ, ಮತದಾರರ ಕಾರ್ಡ್‌ಗೆ ಹೊಸ ಅರ್ಜಿ ಸಲ್ಲಿಸಿದ್ದು, ಯಾವಾಗ ಬರುತ್ತದೆ? ಮತದಾರರ ಪಟ್ಟಿಯಲ್ಲಿ ನನ್ನ ಹೆಸರು ಸಿಗುತ್ತಿಲ್ಲ, ಮತದಾರರ ಕಾರ್ಡ್‌ಲ್ಲಿ ಮಾಹಿತಿ ತಿದ್ದುಪಡಿ ಮಾಡಲು ಯಾವ ಫಾರಂ ತುಂಬಬೇಕು? ನಮ್ಮ ಭಾಗದ ಮತಗಟ್ಟೆ ಸಂಖ್ಯೆ ಎಷ್ಟು? ವಿಳಾಸ ಬದಲಾವಣೆ ಮಾಡಿಕೊಳ್ಳುವುದು ಹೇಗೆ? ಹೀಗೆ ಮತದಾರರ ಚೀಟಿಗೆ ಸಂಬಂಧಿಸಿದ ಹಲವಾರು ಪ್ರಶ್ನೆಗಳ ಕುರಿತಂತೆ ಫೋನ್ ಕರೆಗಳು ಸ್ವೀಕೃತವಾಗುತ್ತಿದ್ದು, ಸಹಾಯವಾಣಿ ಸಿಬ್ಬಂದಿಗಳು ಸೂಕ್ತ ಉತ್ತರ ನೀಡುತ್ತಿದ್ದಾರೆ.

ಈ ರೀತಿ ಬರುವ ಕರೆಗಳಲ್ಲಿ ಯುವ ಮತದಾರರ ಕರೆಗಳೇ ಹೆಚ್ಚಾಗಿವೆ. ಅದರಲ್ಲೂ ಗ್ರಾಮೀಣ ಯುವ ಮತದಾರರಿಂದ ಅತಿ ಹೆಚ್ಚು ಕರೆಗಳು ಸ್ವೀಕಾರವಾಗುತ್ತಿವೆ. ಮತದಾರರ ನೋಂದಣಿ, ರದ್ದುಪಡಿಸುವಿಕೆ, ಸ್ಥಳಾಂತರ ಕುರಿತ ಫಾರಂ 6, 7, 8 ಕುರಿತಂತೆ ಕರೆಗಳಿಗೂ ಕೂಡ ಮಾಹಿತಿ ಪಡೆದು ಉತ್ತರಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

# ಕೆಎಸ್‌ಎಸ್ ಕಾಲೇಜಿನಲ್ಲಿ ಸಿಬ್ಬಂದಿಗಳ ಬೀಳ್ಕೊಡುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾಗಿದ್ದು, ಈ ವೃತ್ತಿಯಲ್ಲಿ 35 ವರ್ಷಗಳ ಕಾಲ ಹಲವಾರು ವಿದ್ಯಾರ್ಥಿಗಳ ಬಾಳಿಗೆ ದಾರಿ ದೀಪವಾದ ನಿಮ್ಮ ಸೇವೆ ಅವಿಸ್ಮರಣೀಯ. ಮುಂದೆಯೂ ವಿದ್ಯಾರ್ಥಿಗಳಿಗೆ ನಿಮ್ಮ ಸೇವೆ ದೊರೆಯಲಿ ಎಂದು ಗದುಗಿನ ಕನಕದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಡಾ. ಬಿ.ಎಫ್. ದಂಡಿನ ಹೇಳಿದರು.

ಅವರು ನಗರದ ಕನಕದಾಸ ಶಿಕ್ಷಣ ಸಮಿತಿಯ ಕೆಎಸ್‌ಎಸ್ ಕಾಲೇಜಿನ ಡಾ. ಬಿ.ಎಫ್ ದಂಡಿನ ಸಭಾಭವನದಲ್ಲಿ ಪ್ರಾಧ್ಯಾಪಕ ಡಾ. ಬಿ.ಜಿ. ತಳ್ಳಳ್ಳಿ ಹಾಗೂ ಪ್ರೊ. ಬಿ.ಎಸ್. ಹಿರೇಮಠ ಇವರ ಸೇವಾ ನಿವೃತ್ತಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಿತಿಯ ಕಾರ್ಯದರ್ಶಿ ರವೀಂದ್ರನಾಥ ದಂಡಿನ, ಪುನೀತಕುಮಾರ ಬೆನಕನವಾರಿ, ಪ್ರಾಂಶುಪಾಲ ಡಿ.ಬಿ. ಗವಾನಿ ಮಾತನಾಡಿ, ನಿಮ್ಮ ಸೇವೆಯಲ್ಲಿನ ಶಿಸ್ತು ಸಮಯ ಪ್ರಜ್ಞೆ ದಾರಿದೀಪವಾಗಿದೆ. ನಿಮ್ಮ ಅನುಪಮ ಸೇವೆಗೆ ಸಂಸ್ಥೆ ಮತ್ತು ವಿದ್ಯಾರ್ಥಿಗಳು ಕೃತಜ್ಞರಾಗಿದ್ದೇವೆ ಎಂದರು.

ಗೌರವ ಸನ್ಮಾನ ಸ್ವೀಕರಿಸಿ ಮಾತನಾಡಿದ ನಿ.ಪ್ರಾಧ್ಯಾಪಕ ಡಾ. ಬಿ.ಜಿ. ತಳ್ಳಳ್ಳಿ ಮತ್ತು ಪ್ರೊ. ಎಸ್.ಬಿ. ಹಿರೇಮಠ, ನಮಗೆ ಈ ಸಂಸ್ಥೆ ಶ್ರೇಷ್ಠವಾದ ಬದುಕು, ಗೌರವ, ಸ್ಥಾನ-ಮಾನ ಎಲ್ಲವನ್ನೂ ಕೊಟ್ಟಿದ್ದು ಜೀವನದ ಕೊನೆಯವರೆಗೂ ಋಣಿಯಾಗಿರುತ್ತೇವೆ ಎಂದರು.

ಶ ಕ ು ಂ ತ ಲಾ ಬಾ ಯಿ ದಂಡಿನ, ಜಿ.ಸಿ. ಜಪ್ಪಣ್ಣವರ, ಮಧುಶ್ರೀ, ಕಾಲೇಜಿನ ಪ್ರಾಧ್ಯಾಪಕರು, ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು, ಕುಟುಂಬಸ್ಥರು ಪಾಲ್ಗೊಂಡಿದ್ದರು.

### ಡಿಮ್ಹಾನ್ಸ್ ಸಂಸ್ಥೆಯಲ್ಲಿ ವಿಶ್ವ ಬೈ ಪೋಲಾರ್ ದಿನಾಚರಣೆ

# ಬೈ ಪೋಲಾರ್ ಖಾಯಿಲೆಯನ್ನು ಕಡೆಗಣಿಸಬೇಡಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ (ಡಿಮ್ಹಾನ್ಸ್) ಧಾರವಾಡದ ಓ.ಪಿ.ಡಿ ವಿಭಾಗದಲ್ಲಿ ವಿಶ್ವ ಬೈ ಪೋಲಾರ್ ದಿನಾಚರಣೆಯ ಅಂಗವಾಗಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಡಿಮ್ಹಾನ್ಸ್ ಸಂಸ್ಥೆಯ ನಿರ್ದೇಶಕ ಡಾ. ಅರುಣಕುಮಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಬೈ ಪೋಲಾರ್ ಒಂದು ಕ್ಲಿಷ್ಟಕರ ಮಾನಸಿಕ ಕಾಯಿಲೆಯಾಗಿದ್ದು, ಈ ಕಾಯಿಲೆಯು ಕೇವಲ ಅವರ ಮನಸ್ಥಿತಿ ಮೇಲೆ ಪರಿಣಾಮ ಬೀರುವುದಲ್ಲದೇ, ಅವರ ಜೀವನದ ಮೇಲೆ, ಕುಟುಂಬದ ಸದಸ್ಯರ ಮೇಲೆ ಹಾಗೂ ಸಮುದಾಯ ಮೇಲೆ ಪ್ರಭಾವ ಬೀರುತ್ತದೆ. ಈ ಕಾಯಿಲೆಯಲ್ಲಿ ಉನ್ಮಾದ ಹಾಗೂ ಖಿನ್ನತೆಯ ಲಕ್ಷಣಗಳು ಕೂಡಿಕೊಂಡಿರುತ್ತವೆ.



ಇಂತಹ ಕಾಯಿಲೆಯಿಂದ ಬಳಲುತ್ತಿರುವವರಿಗೆ ಮನೋ ವೈದ್ಯರನ್ನು ಸಂಪರ್ಕಿಸಿ ಸರಿಯಾದ ಚಿಕಿತ್ಸೆ ಮತ್ತು ಔಷಧೋಪಚಾರವನ್ನು ಕೊಡಿಸುವುದರಿಂದ ಗುಣಮುಖರಾಗಿ ಸಮಾಜದಲ್ಲಿ ಎಲ್ಲರೊಂದಿಗೆ ಬೆರೆತು ಜೀವನ ಮಾಡಲು ನೆರವಾಗುತ್ತದೆಂದರು.

ಮನೋವೈದ್ಯಕೀಯ ಸಮಾಜಕಾರ್ಯ ವಿಭಾಗದ ಮುಖ್ಯಸ್ಥ ಡಾ.ಸತೀಶ್ ಕೌಜಲಗಿ ಮಾನಸಿಕ ಕಾಯಿಲೆಗಳ ಲಕ್ಷಣಗಳು, ಆರೈಕೆದಾರರಿಗೆ ಇರಬೇಕಾದ ಜವಾಬ್ದಾರಿಗಳು, ಚಿಕಿತ್ಸಾ ಸೌಲಭ್ಯಗಳ ಬಗ್ಗೆ ವಿವರಿಸಿದರು.

ಡಿಮ್ಹಾನ್ಸ್ ಸಂಸ್ಥೆಯ ವೈದ್ಯಕೀಯ ಅಧೀಕ್ಷಕರು ಹಾಗೂ ಸೈಕಿಯಾಟ್ರಿ ವಿಭಾಗದ ಮುಖ್ಯಸ್ಥ ಡಾ.ರಾಘವೇಂದ್ರ ನಾಯಕ್ ಮಾತನಾಡಿ, ಬೈ ಪೋಲಾರ್ ಮಾನಸಿಕ ಕಾಯಿಲೆಯ ಗುಣಲಕ್ಷಣಗಳು ಹಾಗೂ ಲಭ್ಯವಿರುವ ವೈಜ್ಞಾನಿಕ ಚಿಕಿತ್ಸಾ ಪದ್ಧತಿಗಳ ಕುರಿತು ವಿವರಿಸಿದರು.

ಸೈಕಿಯಾಟ್ರಿ ವಿಭಾಗದ ಸಹಪ್ರಾಧ್ಯಾಪಕರಾದ ಡಾ. ಶ್ರೀನಿವಾಸ ಕೊಸಗಿ, ಡಾ. ಮಂಜುನಾಥ ಭಜಂತ್ರಿ ಅತಿಥಿಗಳಾಗಿ ಭಾಗವಹಿಸಿದ್ದರು. ಕಾವೇರಿ ಕಿತ್ತೂರು ಪ್ರಾರ್ಥಿಸಿದರು. ವಿನೋದಾ ಹಿರೇಮಠ ಸ್ವಾಗತಿಸಿದರು. ಅಕ್ಷತಾ ತೋಟಗೇರ್ ನಿರೂಪಿಸಿದರು. ರಾಕೇಶ್ ವಂದಿಸಿದರು.

ಕಾರ್ಯಕ್ರಮದಲ್ಲಿ ಮನೋ ವೈದ್ಯಕೀಯ ಸಮಾಜಕಾರ್ಯ ವಿಭಾಗದ ಸಿಬ್ಬಂದಿಗಳಾದ ಅಶೋಕ ಕೋರಿ, ಓಬಾ ನಾಯ್ಕ, ಪ್ರಶಾಂತ ಪಾಟೀಲ್, ಆರ್.ಎಮ್. ತಿಮ್ಮಾಪೂರ್, ಶ್ರೀದೇವಿ ಬಿರಾದಾರ, ಅನಂತರಾಮು ಬಿ.ಜಿ, ಸೈಕಿಯಾಟ್ರಿಕ್ ನರ್ಸಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ಆರ್.ಶ್ರೀವಾಣಿ ಹಾಗೂ ಉಪನ್ಯಾಸಕರಾದ ಡಾ. ಸುಶೀಲ್‌ಕುಮಾರ್ ರೋಣದ, ಫಿಜಿಯೋಥೇರಪಿಸ್ಟ್ ಡಾ. ಇಸ್ಮೈಲ್, ಎಂ.ಫಿಲ್ ಇನ್ ಸೈಕಿಯಾಟ್ರಿಕ್ ಸೋಷಿಯಲ್ ವರ್ಕ್ ವಿಭಾಗದ ವಿದ್ಯಾರ್ಥಿಗಳಾದ ಲಕ್ಷ್ಮೀ ಮಲ್ಲಿಕ್, ಮೋನಿಶಾ, ರಂಜನಿ, ಸಚಿನ್ ಪ್ರಸಾದ್, ಯತೀಶ್ ಭಾರದ್ವಾಜ್ ಉಪಸ್ಥಿತರಿದ್ದರು.

# ಅಭ್ಯರ್ಥಿಯ ಅಭೂತಪೂರ್ವ ಗೆಲುವಿಗೆ ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಬಿಜೆಪಿಯ ಸರ್ವಾಧಿಕಾರಿ ಧೋರಣೆಯಿಂದ ದೇಶದ ಅಭಿವೃದ್ಧಿ ಕುಂಠಿತವಾಗಿದೆ ಎಂದು ಲೋಕಸಭಾ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ ತಿಳಿಸಿದರು.

ಪಟ್ಟಣದ ತರಳಬಾಳು ಕಲ್ಯಾಣ ಮಂಟಪದಲ್ಲಿ ಇತ್ತೀಚೆಗೆ ನಡೆದ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿ, ದಾವಣಗೆರೆಯಲ್ಲಿ ಎಸ್‌ಎಸ್‌ಕೆ ಟ್ರಸ್ಟ್ ವತಿಯಿಂದ ಬಿಪಿಎಲ್ ಕಾರ್ಡ್ ಹೊಂದಿದವರಿಗೆ ಉಚಿತವಾಗಿ ಡಯಾಲಿಸಿಸ್ ಕಾಯಿಲೆಗೆ ಚಿಕಿತ್ಸೆ



ಹಾಗೂ ಮಹಿಳೆಯರಿಗೆ ಸ್ತನ ಕ್ಯಾನ್ಸರ್‌ನಂತ ಕಾಯಿಲೆಗಳಿಗೆ ಚಿಕಿತ್ಸೆ ನೀಡುತ್ತಾ ಸಾಮಾಜಿಕ ಕಾರ್ಯಗಳಲ್ಲಿ ನಿರತರಾಗಿದ್ದೇವೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಬಗ್ಗೆ ಪ್ರತಿ ಬೂತ್ ಮಟ್ಟದಲ್ಲೂ ತಿಳಿಸಿ ಅಧಿಕ ಮತಗಳ ಅಂತರದಿಂದ ಗೆಲುವಿಗೆ ಸಹಕರಿಸಿ ಎಂದರು.

ವಿ.ಪ ಮಾಜಿ ಸದಸ್ಯ ಕೆ.ಸಿ. ಕೊಂಡಯ್ಯ ಮಾತನಾಡಿ, ಪಕ್ಷದಲ್ಲಿನ ಆಂತರಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಎಲ್ಲ ಹಿರಿಯ ಮುಖಂಡರು ಒಟ್ಟಾಗಿ ಸೇರಿರುವುದು ಲೋಕಸಭಾ ಅಭ್ಯರ್ಥಿಯ ಗೆಲುವಿನ ಸೂಚಕವಾಗಿದೆ ಎಂದರು.

ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಮಾತನಾಡಿ, ನಾವು ಅಧಿಕಾರಕ್ಕೆ ಬರುವ ಮೊದಲು ಘೋಷಿಸಿದ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ನಮ್ಮ ಸರ್ಕಾರವು ನುಡಿದಂತೆ ನಡೆದಿದೆ. ಮಹಿಳೆಯರು ಹೆಚ್ಚು ಜಾಗೃತರಾಗಿ ನಮ್ಮ ಯೋಜನೆಗಳ ಬಗ್ಗೆ ಮನೆಗಳಿಗೆ ಹೋಗಿ ಅರಿವನ್ನು ಮೂಡಿಸಿ, ಕ್ಷೇತ್ರದ ಅಭಿವೃದ್ಧಿಗೆ ಶಕ್ತಿ ನೀಡಿ ಎಂದರು.

ವಿಜಯನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿರಾಜ್ ಶೇಖ್, ದಾವಣಗೆರೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹೆಚ್.ಬಿ. ಮಂಜುನಾಥ, ಕೋಡಿಹಳ್ಳಿ ಭೀಮಪ್ಪ, ಮಹಾಬಲೇಶ್ವರ ಗೌಡ, ಡಿ.ಬಸವರಾಜ ಮಾತನಾಡಿದರು. ಹರಪನಹಳ್ಳಿ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಚಿಗಟೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುಬೇರ ಗೌಡ, ಡಾ. ಬಿ.ಬಿ. ಹೊಸೂರಪ್ಪ, ಕಂಬತ್ತಹಳ್ಳಿ ಮಂಜುನಾಥ, ರಾಮಣ್ಣ, ವೆಂಕಟೇಶ ವಕೀಲರು, ಎಂ.ರಾಜಶೇಖರ, ಚಂದ್ರಶೇಖರ ಭಟ್, ವಿಜಯಲಕ್ಷ್ಮೀ ಭಾಗ್ಯಮ್ಮ, ಇತರರಿದ್ದರು.

### ಶಾಂತಪುರ ಸಂಸ್ಥಾನ ಹಿರೇಮಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ

# ನೈತಿಕ ನಿಯಮಗಳು ಶಾಶ್ವತ



■ವಿಜಯಸಾಕ್ಷಿ ಸುದ್ದಿ, ಸೊರಬ

ಆಧುನಿಕ ಕಾಲದಲ್ಲಿ ಮಾನವೀಯ ಸಂಬಂಧಗಳು ಶಿಥಿಲಗೊಳ್ಳುತ್ತಿವೆ. ಮನುಷ್ಯನಿಗೆ ಮಾನಸಿಕ ಶಾಚಿತಿ, ಸಂತೃಪ್ತಿ ಇಲ್ಲದಂತಾಗಿದೆ. ಭೌತಿಕ ಬದುಕು ಸಮೃದ್ಧಗೊಂಡಂತೆ ಆಂತರಿಕ ಬದುಕು ಪರಿಶುದ್ಧಗೊಳ್ಳಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೊರಬ ತಾಲೂಕಿನ ಶಾಂತಪುರ ಸಂಸ್ಥಾನ ಹಿರೇಮಠದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಹಾಗೂ ಜಾತ್ರಾ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬೆಲೆಯುಳ್ಳ ಬದು-ಕಿಗೆ ಸಂಸ್ಕಾರ ಮುಖ್ಯ. ಸಾಮಾಜಿಕ ಸಂಪ್ರದಾಯಗಳು ಬದಲಾಗಬಹುದು. ಆದರೆ ನೈತಿಕ ನಿಯಮಗಳು ಶಾಶ್ವತವಾಗಿರುತ್ತವೆ. ಮನುಷ್ಯನಲ್ಲಿ ಕರ್ತವ್ಯ, ಶಿಸ್ತು, ಶ್ರದ್ಧೆ, ಛಲ ಮತ್ತು ಸಮರ್ಪಣಾ ಮನೋಭಾವ ಬೆಳೆದುಕೊಂಡು ಬರುವ ಅವಶ್ಯಕತೆಯಿದೆ. ತನಗಾಗಿ ಬಯಸುವುದು ಜೀವ ಗುಣ. ಎಲ್ಲರಿಗಾಗಿ ಬಯಸುವುದು ದೇವ ಗುಣ. ಭೌತಿಕ ಬದು-ಕಿಗೆ ಆಧ್ಯಾತ್ಮ ಜ್ಞಾನದ ಅರಿವು ಮುಖ್ಯವೆಂಬುದನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ್ದಾರೆ ಎಂದರು.

ಜಿ.ಪಂ ಮಾಜಿ ಸದಸ್ಯ ಗಿರೀಶ ಸಮಾರಂಭವನ್ನು ಉದ್ಘಾಟಿಸಿದರು. ಮಳಲಿ ಮಠದ ಡಾ.ನಾಗಭೂಷಣ ಶ್ರೀಗಳು, ಜಡೆ ಡಾ.ಮಹಾಂತ ಶ್ರೀಗಳು, ಸಂಗೊಳ್ಳಿ ಗುರುಲಿಂಗ ಶ್ರೀಗಳು, ಕುರುವತ್ತಿ ನಂದೀಶ್ವರ ಶ್ರೀಗಳು, ಲಕ್ಕವಳ್ಳಿ ಜೈನ ಮಠದ ಶ್ರೀಗಳು, ತಿರುಮಲಕೊಪ್ಪದ ದಾನ್ಯ ದೇವರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ನೇತೃತ್ವವನ್ನು ಶಾಂತಪುರ ಮಠದ ಶಿವಾನಂದ ಶಿವಾಚಾರ್ಯ ಸ್ವಾಮಿಗಳು ವಹಿಸಿದ್ದರು. ಬನ್ನಿಕೊಪ್ಪದ ಡಾ. ಸುಜ್ಞಾನ ಶಿವಾಚಾರ್ಯ ಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಸಾಗರದ ಪಂಚಾಕ್ಷರಯ್ಯನವರು ವೀರಶೈವ ಧರ್ಮದ ಹಿರಿಮೆ ಮತ್ತು ಗುರು ಮಹಿಮೆ ಕುರಿತು ಉಪನ್ಯಾಸವನ್ನಿತ್ತರು. ಸದಾನಂದಗೌಡ್ರು ಬಳಗಲಿ, ಜಡೆ ಕೆ.ಬಂಗಾರಪ್ಪಗೌಡ್ರು ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಕಾಳಂಗಿ ಮತ್ತು ಅಗಸನಹಳ್ಳಿ ಭಜನಾ ಮಂಡಳಿಯಿಂದ ಪ್ರಾರ್ಥನಾ ಗೀತೆ ಜರುಗಿತು. ಬಂಕವಳ್ಳಿ ಬಿ.ವೀರೇಂದ್ರಗೌಡ ನಿರೂಪಿಸಿದರು. ಕುಬಟೂರಿನ ಗಿರೀಶ ಸಹೋದರರು ಪ್ರಸಾದ ಸೇವೆ ಸಲ್ಲಿಸಿದರು.

# ಹಾರೂಗೇರಿ ಗ್ರಾಪಂ; ಕಡ್ಡಾಯ ಮತದಾನ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಹಾರೋಗೇರಿ ಗ್ರಾ.ಪಂ ವ್ಯಾಪ್ತಿಯಲ್ಲಿ ನಡೆದಿರುವ ಗ್ರಾಮ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಸಮನಿ, ಲೋಕಸಭೆ ಚುನಾವಣೆಯಲ್ಲಿ ಕಡ್ಡಾಯ ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

ಈ ವೇಳೆ ನರೇಗಾ ಕೂಲಿಕಾರರನ್ನು ಉದ್ದೇಶಿಸಿ



ಮಾತನಾಡಿದ ಅವರು, ಸಂವಿಧಾನದ ಆಶಯದಂತೆ ತಪ್ಪದೇ ಮತದಾನ ಮಾಡುವ ಮೂಲಕ ಎಲ್ಲರೂ ಜವಾಬ್ದಾರಿ ಮೆರೆಯುವುದು ಅತ್ಯವಶ್ಯ. ಹಾಗಾಗಿ ಯಾವುದೇ ಕಾರಣಕ್ಕೂ ಮತದಾನದಿಂದ ದೂರ ಉಳಿಯುವ ಬೇಜವಾಬ್ದಾರಿ ತೆ-ೂರದೆ ತಪ್ಪದೇ ನಿಮಗೆ ಸೂಕ್ತ ಎನಿಸುವ ಅಭ್ಯರ್ಥಿಗೆ ಮತ ಹಾಕುವುದು ಜವಾಬ್ದಾರಿ ಎನಿಸಿಕೊಳ್ಳುತ್ತದೆ ಎಂದರು.

ತಾ.ಪಂ ಸಹಾಯಕ ನಿರ್ದೇಶಕ (ಪಂ.ರಾಜ್) ಪ್ರವೀಣ ಗೋಣೆಮ್ಮನವರ ಮಾತನಾಡಿ, ಮತದಾನ ಸಂವಿಧಾನಾತ್ಮಕ ಹಕ್ಕು. ಮತದಾನ ಕಾರ್ಯದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಮೇ 7ರಂದು ಲೋಕಸಭೆ ಚುನಾವಣೆಗೆ ಮತದಾನ ನಿಗದಿಪಡಿಸಲಾಗಿದೆ. ಎಲ್ಲರೂ ತಪ್ಪದೇ ಪ್ರಜಾಪ್ರಭುತ್ವದ ಹಬ್ಬದಲ್ಲಿ ಭಾಗಿಯಾಗಬೇಕು ಎಂದರು.

ಪಿಡಿಓ ಮಹೇಶ ಅಲ್ಲೀಪುರ ಮಾತನಾಡಿ, ಈಗ ಬೇಸಿಗೆ ಅವಧಿ ಶುರುವಾಗಿದೆ. ಹೆಚ್ಚೆಚ್ಚು ಕೆಲಸ ಒದಗಿಸಲು ನರೇಗಾ ಯೋಜನೆಯಡಿ ಸಮುದಾಯ ಕಾಮಗಾರಿಗಳು ಆರಂಭವಾಗಿವೆ. ಕೆಲಸದ ಜೊತೆಗೆ ಮತದಾನ ಮಾಡುವುದು ಸಹ ನಮ್ಮ ಕರ್ತವ್ಯ ಎಂದರು. ಕೂಲಿಕಾರರರಿಗೆ ಮತದಾನದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಟಿಎಇ ಜ್ಯೋತಿ ಕೆಲೂರ್ ಮತ್ತು ಗ್ರಾ.ಪಂ ಸಿಬ್ಬಂದಿ ಇದ್ದರು.

## ನಕಲಿ ಜಾತಿ ಪ್ರಮಾಣ ಪತ್ರ ಪ್ರಕರಣ: 3 ಜಿಲ್ಲೆಗಳ 30 ಮಂದಿಗೆ ಡಿಸಿಗಳಿಂದ ನೋಟಿಸ್ ಜಾರಿ; ಹೈಕೋರ್ಟ್‌ಗೆ ಸರ್ಕಾರದ ವಿವರಣೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಬ್ಬಲಿಗ ಜಾತಿಯ ಹೆಸರಿನಲ್ಲಿ ಜಾತಿ ಪ್ರಮಾಣ ಪತ್ರ ಪಡೆದು ಆನಂತರ ಪರಿವಾರ ನಾಯಕ ಜಾತಿ ಪ್ರಮಾಣ ಪಡೆದುಕೊಂಡಿರುವ ಕಲಬುರಗಿ, ಯಾದಗಿರಿ ಹಾಗೂ ವಿಜಯಪುರ ಜಿಲ್ಲೆಗಳ ಒಟ್ಟು 30 ಮಂದಿಗೆ ಆಯಾ ಜಿಲ್ಲಾಧಿಕಾರಿಗಳ ಮುಖಾಂತರ ನೋಟಿಸ್ ಜಾರಿಗೊಳಿಸಿ, ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಮಾಹಿತಿ ನೀಡಿದೆ.

ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಕಲಿ ಜಾತಿ ಪ್ರಮಾಣ ಪತ್ರಗಳ ತಡೆ ಸಮಿತಿಯ ಯಾದಗಿರಿ ಜಿಲ್ಲೆಯ ಪ್ರಧಾನ ಕಾರ್ಯದರ್ಶಿ ಮಾರಪ್ಪ ನಾಯಕ ಸೇರಿದಂತೆ ನಾಲ್ವರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರ ನೇತೃತ್ವದ ವಿಭಾಗೀಯ ಪೀಠ ವಿಚಾರಣೆ ನಡೆಸಿತು.

ವಿಚಾರಣೆ ವೇಳೆ ಸರ್ಕಾರದ ಪರ ವಿಶೇಷ ವಕೀಲ ಸಿ ಜಗದೀಶ್ ಅವರು ಹೈಕೋರ್ಟ್ ನಿರ್ದೇಶನದ ಅನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಇದಕ್ಕೆ ಅರ್ಜಿದಾರರ ಪರ ವಕೀಲೆ ಓ ಅಶ್ವಿನಿ ಅವರು ನಕಲಿ ಜಾತಿ ಪ್ರಮಾಣಪತ್ರ ಪಡೆದುಕೊಂಡಿರುವ 6ರಿಂದ 7 ಸಾವಿರ ಜನರ ಬಗ್ಗೆ ಮಾಹಿತಿ ಹಕ್ಕು ಕಾಯಿದೆ ಅಡಿ ಅರ್ಜಿ ಸಲ್ಲಿಸಿ ಮಾಹಿತಿ ಪಡೆದುಕೊಳ್ಳಲಾಗಿದೆ. ಇವರೆಲ್ಲರ ವಿರುದ್ಧ ಕ್ರಮದ ಅಗತ್ಯವಿದೆ ಎಂದು

### ಬೆಣಚಮಟ್ಟಿ ಗ್ರಾಮದಲ್ಲಿ ನರೇಗಾ ಕೂಲಿಕಾರರೊಂದಿಗೆ ವಿಶಿಷ್ಟ ರೀತಿಯಲ್ಲಿ ಮತದಾನ ಜಾಗೃತಿ

# ಮತ ಚಲಾಯಿಸಿ, ಪ್ರಜಾಪ್ರಭುತ್ವ ಗಟ್ಟಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಮತದಾನ ಪವಿತ್ರವಾದ ಕಾರ್ಯವಲ್ಲದೇ ಜನರಿಗೆ ಧ್ವನಿಯನ್ನು ನೀಡುತ್ತದೆ. ನರೇಗಾ ಕೂಲಿಕಾರರು ಮತ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ ಹೇಳಿದರು.

ಗಜೇಂದ್ರಗಡ ತಾಲೂಕಿನ ಕುಂಟೋಜಿ ಗ್ರಾ.ಪಂ ವ್ಯಾಪ್ತಿಯ ಬೆಣಚಮಟ್ಟಿ ಗ್ರಾಮದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಗದಗ, ತಾಲೂಕಾ ಸ್ವೀಪ್ ಸಮಿತಿ ಗಜೇಂದ್ರಗಡ ಹಾಗೂ ಗ್ರಾ.ಪಂ ಕುಂಟೋಜಿ ಸಹಯೋಗದಲ್ಲಿ ನಡೆದ ಎರಡನೇ ದಿನದ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳದಲ್ಲಿ ಮತದಾನ ಕುರಿತು ವಿಶಿಷ್ಟ ರೀತಿಯಲ್ಲಿ ಮತದಾನ ಜಾಗೃತಿ ಕಾರ್ಯಕ್ರಮ ಹಾಗೂ 'ವಲಸೆ ಯಾಕ್ರಿ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ' ಅಭಿಯಾನದಲ್ಲಿ ಅವರು ಮಾತನಾಡಿದರು.

ಮೇ ತಿಂಗಳಲ್ಲಿ ಜರುಗುವ ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶ ನಿರ್ಮಿಸೋಣ. ಮತದಾನ ದಿನದಂದು ನಾವು ಸಮಯ ವ್ಯರ್ಥ ಮಾಡದೆ ಚುನಾವಣಾ ಆಯೋಗ




ನಿಗದಿಪಡಿಸಿದ ದಾಖಲೆಗಳನ್ನು ತೆಗೆದುಕೊಂಡು ಹೋಗಿ ಮತ ಚಲಾಯಿಸಬೇಕು ಎಂದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಡಾ. ಡಿ.ಮೋಹನ್ ಮಾತನಾಡಿ, ಮೇ 7ರಂದು ಲೋಕಸಭಾ ಚುನಾವಣೆ ನಡೆಯಲಿದ್ದು, ಬೆಣಚಮಟ್ಟಿ ಗ್ರಾಮದ ಕೂಲಿಕಾರರು ತಪ್ಪದೇ ನಿಮ್ಮ ಮತಗಟ್ಟೆಯಲ್ಲಿ ಮತದಾನ ಮಾಡಬೇಕು. ಇಲ್ಲಿ ತಾಂಡಾ ಜನರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಅವರು ನೂರಕ್ಕೆ ನೂರರಷ್ಟು ಮತದಾನ ಮಾಡಬೇಕು ಎಂದರು.

ಕಾಮಗಾರಿ ಸ್ಥಳದಲ್ಲಿ 482 ಜನ ಕೂಲಿಕಾರರು ಇದ್ದು, ಅದರಲ್ಲಿ ತಾಂಡಾ ಜನರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದರು. ಅವರು ಗುಳೇ ಹೋಗದಂತೆ ಸ್ಥಳೀಯವಾಗಿ ಕೆಲಸ ನೀಡುವುದಾಗಿ ಭರವಸೆ ನೀಡಿದರು.




ಲೋಕಸಭಾ ಸಾರ್ವತ್ರಿಕ ಚುನಾವಣೆ ನಿಮಿತ್ತ ಮತದಾನ ಕುರಿತು, ಉದ್ಯೋಗ ಖಾತ್ರಿ ಅಭಿಯಾನದ ಕುರಿತು 'ನಮ್ಮ ಹೆಮ್ಮೆಯ ನರೇಗಾ, ನಾವು ಗುಳೇ ಹೋಗುವುದಿಲ್ಲ, ಮತದಾನ ನಮ್ಮ ಹಕ್ಕು' ಎಂದು ಕೂಲಿಕಾರರು ಪ್ಲೇ ಕಾರ್ಡ್ ಹಿಡಿದು ವಿಭಿನ್ನವಾಗಿ ಜಾಗೃತಿ ಮೂಡಿಸಿದರು. ಕಾಮಗಾರಿ ಸ್ಥಳದಲ್ಲಿ ಸ್ವೀಪ್ ಮತ್ತು ಮೇ 7 ಎಂದು ಅಕ್ಷರ ಬರೆದು ಅದರ ಮೇಲೆ ಕೂಲಿಕಾರರನ್ನು ಕೂರಿಸಿ, ವಿಶೇಷವಾಗಿ ಜಾಗೃತಿ ಮೂಡಿಸುವ ಮೂಲಕ ಕೂಲಿಕಾರರಲ್ಲಿ ಉತ್ಸಾಹ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ (ಗ್ರಾ.ಉ) ಬಸವರಾಜ ಬಡಿಗೇರ್, ಪಿಡಿಓ ಮಹಾಂತೇಶ ತಳವಾರ, ಜಿ.ಪಂ ಎಡಿಪಿಸಿ ಕಿರಣಕುಮಾರ ಎಸ್.ಎಚ್, ತಾಂತ್ರಿಕ ಸಂಯೋಜಕರಾದ ಪ್ರಿಯಾಂಕಾ ಅಂಗಡಿ, ತಾಲೂಕ ಸಂಯೋಜಕರಾದ ವಸಂತ ಅನ್ವರಿ, ಐಇಸಿ ಸಂಯೋಜಕ ಮಂಜುನಾಥ ಹಳ್ಳದ, ತಾಂತ್ರಿಕ ಸಹಾಯಕರಾದ ಅಜಯ್ ಹೂಗಾರ, ಬಿಎಫ್‌ಟಿ ಶಂಕರ ಪಾಟೀಲ, ಜಿಕೆಎಂ ಅನ್ನಪೂರ್ಣಮ್ಮ ಹಿರೇಮಠ, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

### ಸೇವಾ ನಿವೃತ್ತರಾದ ಸಾರಿಗೆ ಸಿಬ್ಬಂದಿಗೆ ಬೀಳ್ಕೊಡುಗೆ ಸಮಾರಂಭ

# ಸಂಸ್ಥೆಯನ್ನು ಆರ್ಥಿಕವಾಗಿ ಬಲಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಚಾಲಕ ಮತ್ತು ನಿರ್ವಾಹಕರು ಕರ್ತವ್ಯಕ್ಕೆ ಗೈರು ಹಾಜರಾಗದಂತೆ ಕಾರ್ಯ ನಿರ್ವಹಿಸಿ ಪ್ರಯಾಣಿಕರಿಗೆ ಉತ್ತಮ ಸೇವೆ ಒದಗಿಸುವ ಮೂಲಕ ಸಂಸ್ಥೆಯನ್ನು ಆರ್ಥಿಕವಾಗಿ ಬಲಗೊಳಿಸಬೇಕೆಂದು ವಾಕರಸಾ ಸಂಸ್ಥೆಯ ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ. ದೇವರಾಜ ಹೇಳಿದರು.

ಅವರು ಗದುಗಿನ ಹೊಸ ಬಸ್ ನಿಲ್ದಾಣದಲ್ಲಿ ಸೇವಾನಿವೃತ್ತರಾದ ಸಹಾಯಕ ಸಂಚಾರ ನಿರೀಕ್ಷಕ ಎಂ.ಆಂಜನೇಯ, ಸಾರಿಗೆ ನಿಯಂತ್ರಕ ಕೆ.ಬಿ. ಗಡಾದ ಅವರಿಗೆ ಏರ್ಪಡಿಸಿದ್ದ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾರಿಗೆ ಸಂಸ್ಥೆಯ ಸಿಬ್ಬಂದಿಯ ಮೇಲೆ ಬಹಳಷ್ಟು ಜವಾಬ್ದಾರಿಗಳಿವೆ.



ಸರಕಾರ ಇತ್ತೀಚೆಗೆ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಆರಂಭಿಸಿದ ಬಳಿಕ ಬಸ್‌ಗಳ ಓಡಾಟ ಮತ್ತು ಪ್ರಯಾಣಿಕರ ಸಂಖ್ಯೆ ಹೆಚ್ಚಿದೆ. ಪ್ರಯಾಣಿಕರಿಗೆ ಉತ್ತಮ ಸೇವೆ ನೀಡುವದು ಹಿರಿಯ ಅಧಿಕಾರಿಗಳು ಸೇರಿದಂತೆ ಎಲ್ಲ ಸಿಬ್ಬಂದಿಯ ಕರ್ತವ್ಯವಾಗಿದೆ ಎಂದರು.

ಆಂಜನೇಯ ಮತ್ತು ಗಡಾದ ಅವರು ಸಂಸ್ಥೆಯ ಘನತೆ, ಗೌರವ ಹೆಚ್ಚಿಸುವ ರೀತಿಯಲ್ಲಿ ಉತ್ತಮ ಕಾರ್ಯ ಮಾಡಿದ್ದಾರೆ. ಅವರ ನಿವೃತ್ತಿಯ ಬಳಿಕ ಹೊಸದಾಗಿ ಆ ಸ್ಥಾನಕ್ಕೆ ಬರುವವರೂ ಸಹ ಪ್ರಯಾಣಿಕರೊಂದಿಗೆ ಸೌಜನ್ಯಯುತವಾಗಿ ವರ್ತಿಸಿ ಉತ್ತಮ ಸೇವೆ ನೀಡಲಿ ಎಂದರು.

ಕಾರ್ಮಿಕ ಮುಖಂಡ ಎಸ್.ಕೆ. ಅಯ್ಯನಗೌಡ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮುಖಂಡರಾದ ಮೋಹನ ಆಲಮೇಲಕರ, ಪಿ.ಎಂ. ತೇರದಾಳ, ಎಚ್.ಸಿ. ಕೊಪ್ಪಳ, ಗೋಪಾಲರಾಯ, ಅದರಗುಂಚಿ ಸೇವಾ ನಿವೃತ್ತರ ಬಗ್ಗೆ ಮಾತನಾಡಿದರು. ವೇದಿಕೆಯ ಮೇಲೆ ಕಾರ್ಮಿಕರ ಮುಖಂಡರಾದ ಶಾಂತಣ್ಣ ಮುಳವಾಡ, ರಾಮೇನಹಳ್ಳಿ, ಲಕ್ಷ್ಮಣ ಡೊಂಗರಿ, ಕಪ್ಪತ್ತನವರ, ಶಶಿಧರ ಕೊಡಕೇರಿ ಉಪಸ್ಥಿತರಿದ್ದರು.

ಎಸ್.ಜಿ. ಹುಣಶೀಮರದ ಪ್ರಾರ್ಥಿಸಿ ನಿರೂಪಿಸಿದರು. ಸಾರಿಗೆ ನಿಯಂತ್ರಕ ವೆಂಕಟೇಶ ಜಾಧವ ವಂದಿಸಿದರು.

# ಪಿ.ಸಿ. ಗದ್ದಿಗೌಡ್ರ ಪರ ಪ್ರಚಾರ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಲೋಕಸಭಾ ಚುನಾವಣೆಯ ಪ್ರಚಾರಾರ್ಥವಾಗಿ ಲಕ್ಕುಂಡಿ ಗ್ರಾಮದಲ್ಲಿ ಬಾಗಲಕೋಟ ಬಿಜೆಪಿ ಅಭ್ಯರ್ಥಿ ಪಿ.ಸಿ. ಗದ್ದಿಗೌಡ್ರ ಅವರ ಪರವಾಗಿ ಮಹಿಳಾ ಮುಖಂಡರು ಗ್ರಾಮದಲ್ಲಿ ಪ್ರಚಾರ ಸಭೆ ನಡೆಸಿದರು.

ಬಾಗಲಕೋಟ ಜಿಲ್ಲಾ ಬಿಜೆಪಿಯ ಪ್ರಮುಖರಾದ ಡಾ. ವಿಜಯಲಕ್ಷ್ಮೀ ತುಂಗಳ ಮಾತನಾಡಿ, ಪ್ರಧಾನಿ ಮೋದಿಯವರು 10 ವರ್ಷಗಳಲ್ಲಿ ದೇಶವನ್ನು ಜಗತ್ತಿನಲ್ಲಿಯೇ ಗುರುತಿಸುವಂತೆ ಮಾಡಿದ್ದಾರೆ. ಮಹಿಳೆಯರಿಗಾಗಿ ಉಜ್ವಲ ಯೋಜನೆ, ಸುಕನ್ಯಾ ಸಮೃದ್ಧಿ ಸೇರಿದಂತೆ ಸ್ವ ಉದ್ಯೋಗ ಕಲ್ಪಿಸಲು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಅವುಗಳನ್ನು ನಾವೆಲ್ಲರೂ ಮನೆ ಮನೆಗೆ ತಿಳಿಸಿ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿಸಬೇಕು ಎಂದರು.

ಬಾಗಲಕೋಟ ಜಿಲ್ಲಾ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಸವಿತಾ ಹೊಸೂರು ಮಾತನಾಡಿ, ಚುನಾವಣೆಯಲ್ಲಿ ಸ್ಪರ್ಧಿಸಲು ಮಹಿಳೆಯರಿಗಾಗಿ ಶೇ.33ರಷ್ಟು ಮೀಸಲಾತಿ ಕಲ್ಪಿಸಿದ್ದು, ಇದರಿಂದ ದೇಶದಲ್ಲಿ ಮಹಿಳೆಯರಿಗೆ ಹೆಚ್ಚಿನ ಶಕ್ತಿ ಬರಲಿದೆ. 'ಮೋದಿ ಮತ್ತೊಮ್ಮೆ' ಎಂಬ ಘೋಷ ವಾಕ್ಯವನ್ನು ನಿಜವಾಗಿಸಬೇಕು ಎಂದರು.

ಗ್ರಾ.ಪಂ ಮಾಜಿ ಅಧ್ಯಕ್ಷೆ, ಹಾಲಿ ಸದಸ್ಯೆ ಲಲಿತಾ ಗದಗಿನ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಮಖಂಡಿ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಗೀತಾ ಸೂರ್ಯವಂಶಿ, ಗ್ರಾ.ಪಂ ಸದಸ್ಯ ವೀರಣ್ಣ ಚಕ್ರಸಾಲಿ, ಮರಿಯಪ್ಪ ವಡ್ಡರ, ನೀಲವ್ವ ನೀರಲಗಿ ಉಪಸ್ಥಿತರಿದ್ದರು. ಲಕ್ಷ್ಮೀ ಕುಂಬಾರ ಸ್ವಾಗತಿಸಿ ವಂದಿಸಿದರು.

### ಬಿಂಕದಕಟ್ಟಿ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಅಧಿಕಾರಿಗಳ ಭೇಟಿ

# ಅಳತೆಗೆ ತಕ್ಕಂತೆ ನರೇಗಾ ಕೂಲಿ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಬಿಂಕದಕಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಗದಗ ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ಹಾಗೂ ಗದಗ ತಾಲೂಕಿನ ಸಹಾಯಕ ನಿರ್ದೇಶಕ ಕುಮಾರ್ ಪೂಜಾರ್ (ಗ್ರಾ.ಉ) ಭೇಟಿ ನೀಡಿ ಕಾಮಗಾರಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನರೇಗಾ ಯೋಜನೆಯ 'ವಲಸೆ ಯಾಕ್ರೀ, ನಿಮ್ಮೂರಲ್ಲೇ ಉದ್ಯೋಗ ಖಾತ್ರಿ–ಉದ್ಯೋಗ ಖಾತ್ರಿ ದುಡಿಮೆ ಖಾತ್ರಿ' ಅಭಿಯಾನದಡಿ ಏಪ್ರಿಲ್




1ರಿಂದ ಮೇ ಅಂತ್ಯದವರೆಗೆ ನರೇಗಾ ಯೋಜನೆಯಡಿ ನೋಂದಾಯಿತ ಕೂಲಿಕಾರರಿಗೆ ನಿರಂತರವಾಗಿ ಕೆಲಸ ನೀಡುವ ಬಗ್ಗೆ ಮಾಹಿತಿ ನೀಡಿದರು.

ನರೇಗಾ ಯೋಜನೆಯ ನಿಯಮಾನುಸಾರ ಕೂಲಿ ಕಾರ್ಮಿಕರು ಕೆಲಸ ನಿರ್ವಹಣೆ ಮಾಡಬೇಕು. ಹಾಜರಾತಿಯಲ್ಲಿ ಹೆಸರಿದ್ದು, ಕೆಲಸಕ್ಕೆ ಹಾಜರಾಗದೆ ಇದ್ದರೆ ಅಂಥವರ 100 ದಿನದ ಹಾಜರಾತಿಯಲ್ಲಿ ಹಾಜರಾತಿ ಕಡಿತಗೊಳ್ಳುವದು ಹಾಗೂ ಕೆಲಸದ ಪ್ರಮಾಣಕ್ಕೆ ತಕ್ಕಂತೆ ಕೂಲಿ ಮೊತ್ತ ಪಾವತಿಸಲಾಗುವದು. ಗಂಡು ಮತ್ತು ಹೆಣ್ಣಿಗೆ ಸಮಾನ ಕೂಲಿ ನೀಡಲಾಗುವುದು ಎಂದು ತಿಳಿಸಿದರು.

2024ರ ಲೋಕಸಭೆ ಚುನಾವಣೆಯ ಪ್ರಯುಕ್ತ ಕಾಮಗಾರಿ ಸ್ಥಳದಲ್ಲಿ ಹಾಜರಿದ್ದ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ಮತದಾರರು ಕೂಡ ಮತದಾನ ಮಾಡುವುದು ಅವರ ಆದ್ಯ ಕರ್ತವ್ಯವಾಗಿರುತ್ತದೆ. 18 ವರ್ಷ ತುಂಬುವ ಮತದಾರರಿಗೆ VHA Appನಲ್ಲಿ ನೋಂದಾಯಿಸಿಕೊಂಡು ಮತದಾರರಾಗಲು ಕರೆ ನೀಡಿದರು. ಮತದಾನ ಪ್ರಕ್ರಿಯೆಯಿಂದ ಯಾವೊಬ್ಬ ವ್ಯಕ್ತಿ ಕೂಡ ಹೊರಗುಳಿಯಬಾರದು ಎಂದು ತಿಳಿಸಿದರು.

ಪಿಡಿಓ ರೆಹಮತ್ ಬಾನು ಹಾಜರಿದ್ದ ಕೂಲಿಕಾರರಿಗೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಸಿಬ್ಬಂದಿಗಳು, ತಾಲೂಕು ನರೇಗಾ ಸಿಬ್ಬಂದಿಗಳು, ನರೇಗಾ ನೋಂದಾಯಿತ ಕೂಲಿಕಾರರು ಹಾಜರಿದ್ದರು.

# ಕೃಷಿ ವಿಜ್ಞಾನ ಕೇಂದ್ರದ ದುರಪಯೋಗ ನಿಲ್ಲಲಿ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಹುಲಕೋಟಿ ಗ್ರಾಮದಲ್ಲಿರುವ ಕೃಷಿ ವಿಜ್ಞಾನ ಕೇಂದ್ರ(ಕೆವಿಕೆ)ವನ್ನು ಕಾಂಗ್ರೆಸ್ ಪಕ್ಷ ದುರಪಯೋಗಪಡಿಸಿಕೊಳ್ಳುತ್ತಿದ್ದು, ಅದನ್ನು ಕೂಡಲೇ ನಿಲ್ಲಿಸಬೇಕೆಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಹಾಗು ಜಿಲ್ಲಾ ವಕ್ತಾರರಾದ ಎಂ.ಎಂ. ಹಿರೇಮಠರವರು ಒತ್ತಾಯಿಸಿದ್ದಾರೆ.

ಈ ಬಗ್ಗೆ ಜಂಟಿ ಪತ್ರಿಕಾ ಹೇಳಿಕೆ ನೀಡಿರುವ ಅವರು, ಸರ್ಕಾರದ ಅನುದಾನದಿಂದ ಸ್ಥಾಪಿಸಲ್ಪಟ್ಟ ಇದರ ಮೂಲ ಉದ್ದೇಶ ರೈತರ ಆದಾಯವನ್ನು ದ್ವಿಗುಣಗೊಳಿಸುವದು, ಹೊಸ ಹೊಸ ತಳಿಗಳನ್ನು ರೈತರಿಗೆ ಪರಿಚಯಿಸುವದು, ಯುವ ರೈತರಿಗೆ, ರೈತ ಕಾರ್ಮಿಕರಿಗೆ ಕೃಷಿ ಬಗ್ಗೆ ಹೆಚ್ಚಿನ ತಿಳುವಳಿಕೆಯನ್ನು ನೀಡುವದು, ಗ್ರಾಮೀಣ ಭಾಗದ ಯುವಕರಿಗೆ ಹಾಲಿನ ಡೈರಿ, ಕೋಳಿ ಸಾಕಾಣಿಕೆ, ಬ್ಯಾಂಕಿನ ಸೌಲತ್ತುಗಳ ಬಗ್ಗೆ ತಿಳಿ ಹೇಳುವದಾಗಿದೆ. ಗದಗ ತಾಲೂಕಿನ ಹುಲಕೋಟಿ ಗ್ರಾಮದಲ್ಲಿರುವ ಕೆವಿಕೆ ಕೇಂದ್ರದಲ್ಲಿ ಕಾಂಗ್ರೆಸ್‌ನ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತಿವೆ ಎಂದು ಆರೋಪಿಸಿದ್ದಾರೆ.

ಕೂಡಲೇ ಜಿಲ್ಲಾಧಿಕಾರಿಗಳು ಹಾಗೂ ಚುನಾವಣಾಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ತೋಟಪ್ಪ (ರಾಜು) ಕುರುಡಗಿ, ಎಂ.ಎಂ. ಹಿರೇಮಠ, ರಾಜು ಹೊಂಗಲ, ಬಿ.ಎಚ್. ಲದ್ವಾ ವಕೀಲರು, ಅನಿಲ ಅಬ್ಬಿಗೇರಿ, ದತ್ತಣ್ಣ ಜೊಶಿ, ಶ್ರೀನಿವಾಸ ಹುಬ್ಬಳ್ಳಿ, ಬಿ.ಎಸ್. ಚಿಂಚಲಿ ಮುಂತಾದವರು ಒತ್ತಾಯಿಸಿದ್ದಾರೆ.




■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಚುನಾವಣಾಧಿಕಾರಿಗಳಾಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯಲ್ಲಿ ಏ.03ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಾಮಪತ್ರ ಸಲ್ಲಿಕೆ ಅವಧಿ ಹಾಗೂ ಚುನಾವಣಾಧಿಕಾರಿಗಳ ಕಚೇರಿ ಸುತ್ತಲೂ ಪೊಲೀಸ್ ಬಂದೋಬಸ್ತ್ ಮಾಡುವ ಕುರಿತು ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ಅವರು ಸಭೆ ಜರುಗಿಸಿದರು. ಸಭೆಯಲ್ಲಿ ಉಪ ಪೊಲೀಸ್ ಆಯುಕ್ತರು, ಚುನಾವಣಾ ನೋಡಲ್ ಅಧಿಕಾರಿಗಳು, ಚುನಾವಣಾ ಸಿಬ್ಬಂದಿಗಳು ಭಾಗವಹಿಸಿದ್ದರು.

# ಕಡ್ಡಾಯ ಮತದಾನಕ್ಕೆ ಪತ್ರ ಬರೆದ ವಿದ್ಯಾರ್ಥಿಗಳು

■ವಿಜಯಸಾಕ್ಷಿ ಸುದ್ದಿ, ಧಾರವಾಡ

'ಪ್ರೀತಿಯ ತಂದೆಯವರಿಗೆ, ತಾಯಿಯವರಿಗೆ, ಅಣ್ಣಂದಿರಿಗೆ, ಅಕ್ಕಂದಿರಿಗೆ ನಮ್ಮ ಮುಂದಿನ ಭವಿಷ್ಯದ ಹಿತದೃಷ್ಟಿಯಿಂದ ಬರುವ ಮೇ. 7ರಂದು ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡಿ' ಎಂದು ವಸತಿ ಶಾಲೆಗಳ ವಿದ್ಯಾರ್ಥಿಗಳು ಪಾಲಕರಿಗೆ ಪತ್ರ ಬರೆಯುವ ಮೂಲಕ ಮತದಾನ ಜಾಗೃತಿ ಮೂಡಿಸಿದರು.

ಧಾರವಾಡದ ಪೋಸ್ಟ್ ಮ್ಯಾಟ್ರಿಕ್ ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿಗಳು ತಮ್ಮ ಪಾಲಕರಿಗೆ ಮತದಾನದಿಂದ




ದೂರ ಉಳಿಯದೇ ನಿಮ್ಮ ಮತದಾನದ ಹಕ್ಕನ್ನು ಚಲಾಯಿಸಿ, ಸದೃಢ ಭಾರತ ನಿರ್ಮಾಣಕ್ಕೆ ಕೈ ಜೋಡಿಸಿ ಎಂದು ಪತ್ರಗಳ ಮೂಲಕ ಮನವಿ ಮಾಡಿದರು.

ದಶಕಗಳ ಹಿಂದೆ ಜನರಿಗೆ ಪತ್ರಗಳಿಂದ ಬೇರೆ ಬೇರೆ ಸ್ಥಳಗಳಲ್ಲಿ ನಡೆಯುವ ವಿದ್ಯಮಾನಗಳ ಬಗ್ಗೆ ಮಾಹಿತಿ ದೊರೆ–ಯುತ್ತಿತ್ತು. ಇಂದು ಮೊಬೈಲ್, ಅಂತರ್ಜಾಲ, ಮಾಹಿತಿ ತಂತ್ರಜ್ಞಾನ ಬೆಳವಣಿಗೆಯಿಂದ ಕ್ಷಣಾರ್ಧದಲ್ಲಿ ಮಾಹಿತಿಯನ್ನು ಪಡೆಯಬಹುದಾಗಿದೆ. ಮಕ್ಕಳು ತಮ್ಮ ಪಾಲಕರಿಗೆ ಪತ್ರ ಬರೆಯುವುದರ ಮೂಲಕ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರಣೆ ನೀಡಿದ್ದಾರೆ. ಮಕ್ಕಳ ಪತ್ರ ಬರೆದಿರುವುದನ್ನು ಓದಿದಾಗ ಪಾಲಕರಿಗೆ ಖುಷಿ ನೀಡಲಿದೆ. ಅಲ್ಲದೇ ತಪ್ಪದೇ ಮತ ಚಲಾಯಿಸುವುದರಿಂದ, ಮತದಾನ ಪ್ರಮಾಣ ಹೆಚ್ಚಳವಾಗಲಿದೆಯೆಂದು ಸ್ವೀಪ್ ನೋಡಲ್ ಅಧಿಕಾರಿಗಳೂ ಆಗಿರುವ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ ನುಡಿದರು.

ಜಿ.ಪಂ ಯೋಜನಾ ನಿರ್ದೇಶಕ ದೀಪಕ ಮಡಿವಾಳರ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗೋಪಾಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

## ಕಾಳಿಕಾ ದೇವಸ್ಥಾನದಲ್ಲಿ ಯುಗಾದಿ ಉತ್ಸವ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಂಜಿ ಬಸವೇಶ್ವರ ಸರ್ಕಲ್ ಬಳಿ ಇರುವ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ಏ.8 ಯುಗಾದಿ ಅಮಾವಾಸ್ಯೆ ಹಾಗೂ ಏ.9ರಂದು ಯುಗಾದಿ ಪಾಡ್ಯದ ನಿಮಿತ್ತ, ಏ.13 ಪಂಚಮಿ ನಿಮಿತ್ತ ಸಾಯಂಕಾಲ 7 ಗಂಟೆಗೆ ಪಾಲಕಿ ಉತ್ಸವ ಜರುಗಲಿದೆ. ಸದ್ಭಕ್ತರು ಸಕಾಲಕ್ಕೆ ಆಗಮಿಸಿ ಶ್ರೀ ಕಾಳಿಕಾದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟಣೆಯಲ್ಲಿ ವಿನಂತಿಸಲಾಗಿದೆ.

## ನವೋದಯ ಶಾಲೆಗೆ ಆಯ್ಕೆ



**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯ 5ನೇ ತರಗತಿ ವಿದ್ಯಾರ್ಥಿನಿ ಸೌಜನ್ಯ ಬಿ.ಪಾಟೀಲ ಜವಾಹರ ನವೋದಯ ಶಾಲೆಗೆ ಆಯ್ಕೆಯಾಗಿದ್ದಾಳೆ.

ಕಳೆದ ವರ್ಷ ಜರುಗಿದ ನವೋದಯ ಪ್ರವೇಶ ಪರೀಕ್ಷೆಯಲ್ಲಿ ಸೌಜನ್ಯ ಉತೀರ್ಣಳಾಗಿದ್ದು, ಮುಂಡರಗಿ ತಾಲೂಕು ಕೊರ್ಲಹಳ್ಳಿ ಗ್ರಾಮದ ಜವಾಹರ ನವೋದಯ ಶಾಲೆಗೆ 6ನೇ ತರಗತಿಗೆ ಪ್ರವೇಶ ಪಡೆದಿದ್ದಾಳೆ. ಶಾಲೆಯ ಪ್ರಧಾನ ಗುರುಮಾತೆ ಆರ್.ಬಿ. ಬರದ್ವಾಡ, ಹಿರಿಯ ಶಿಕ್ಷಕ ಬಿ.ಐ. ಗರ್ಜಪ್ಪನವರ, ರಫಿಯಾ ದಂಡಿನ, ಸಂಗೀತಾ ತಡಹಾಳ, ಎಫ್.ಬಿ. ಬರದ್ವಾಡ, ಎ.ಎಂ. ದಂಡಿನ, ಆರ್.ಎಸ್. ಪಾಟೀಲ, ಪಿ.ಕೆ.ಪಿ.ಎಸ್ ನಂ.1ರ ವ್ಯವಸ್ಥಾಪಕ ಶರಣಪ್ಪ ಗರ್ಜಪ್ಪನವರ ಹಾಗೂ ಅಧ್ಯಕ್ಷರು, ನಿರ್ದೇಶಕರು, ಪಾಲಕರು, ಶಿಕ್ಷಣ ಪ್ರೇಮಿಗಳು ವಿದ್ಯಾರ್ಥಿನಿಯನ್ನು ಅಭಿನಂದಿಸಿದ್ದಾರೆ.

### ಪ್ರತಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಭಾರತೀಯ ವಿದ್ಯಾಭವನದ ನಾಗಲಕ್ಷ್ಮೀ ಕೆ.ರಾವ್

# ಪುಲಿಗೆರೆ ಉತ್ಸವ ಏ.19ರಿಂದ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಇನ್‌ಫೋಸಿಸ್ ಪ್ರತಿಷ್ಠಾನ ಹಾಗೂ ಭಾರತೀಯ ವಿದ್ಯಾಭವನದ ಆಶ್ರಯದಲ್ಲಿ ಕಳೆದ 6 ವರ್ಷಗಳಿಂದ ಪುಲಿಗೆರೆ ಉತ್ಸವ ನಡೆಸುತ್ತಾ ಬರಲಾಗಿದ್ದು. ಈ ವರ್ಷವೂ ಏ.19, 20 ಮತ್ತು 21ರಂದು 7ನೇ ವರ್ಷದ ಸಂಗೀತ-ನೃತ್ಯ-ಚಿತ್ರ ಸಂಭ್ರಮಗಳ ಪುಲಿಗೆರೆ ಉತ್ಸವದ ಸಾಂಸ್ಕೃತಿಕ ಮೆರುಗು ಮೇಳೈಸಲಿದೆ ಎಂದು ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಹೇಳಿದರು.

ಅವರು ಬುಧವಾರ ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಸಹಯೋಗದಲ್ಲಿ ಪ್ರತಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿ, ಐತಿಹಾಸ ಪ್ರಸಿದ್ಧ ಸೋಮೇಶ್ವರ ದೇವಸ್ಥಾನವನ್ನು ಇನ್‌ಫೋಸಿಸ್‌ನ ಡಾ.ಸುಧಾಮೂರ್ತಿಯರು ತಮ್ಮ ಪ್ರತಿಷ್ಠಾನದಿಂದ 5 ಕೋಟಿ ರೂ ವೆಚ್ಚದಲ್ಲಿ ಜೀರ್ಣೋದ್ಧಾರಗೊಳಿಸಿದ್ದಾರೆ. ಬಳಿಕ ದೇವಸ್ಥಾನದಲ್ಲಿ ಸಂಗೀತ, ನೃತ್ಯ, ಇತಿಹಾಸ ಹೀಗೆ ಸಾಂಸ್ಕೃತಿಕ ಪರಂಪರೆ ಮುಂದುವರೆಯಬೇಕು ಎಂಬ ಉದ್ದೇಶದಿಂದ ತಮ್ಮದೇ ಪ್ರತಿಷ್ಠಾನದಿಂದ ಲಕ್ಷಾಂತರ ರೂ ಖರ್ಚು ಮಾಡಿ ಪ್ರತಿ ವರ್ಷ 3 ದಿನಗಳ ಕಾಲ ಪುಲಿಗೆರೆ ಉತ್ಸವ ಕಾರ್ಯಕ್ರಮ ನಡೆಸುತ್ತಿದ್ದಾರೆ.

ನಾಡಿನ ನಾನಾ ಮೂಲೆಗಳ ಪ್ರಸಿದ್ಧ ಸಂಗೀತಕಾರರು, ನೃತ್ಯಪಟುಗಳು, ಚಿತ್ರಕಲಾವಿದರನ್ನು ಗುರುತಿಸಿ ಅವರನ್ನು ನಿಮ್ಮಲ್ಲಿಗೆ ಕರೆತಂದು ಅವರ ಮೂಲಕ ಇಲ್ಲಿನ ಜನರಿಗೆ ಸಂಗೀತದ ರಸದೌತಣ ನೀಡುವ ಕಾರ್ಯ ಮಾಡುತ್ತಿರುವುದು ನಿಜಕ್ಕೂ ಶ್ಲಾಘನೀಯ. ಭಾರತೀಯ ವಿದ್ಯಾಭವನ ಹೊರತುಪಡಿಸಿದರೆ ದೊಡ್ಡ ಪ್ರಮಾಣದಲ್ಲಿ ಕಾರ್ಯಕ್ರಮ ನಡೆಯುತ್ತಿರುವದು ಲಕ್ಷ್ಮೇಶ್ವರದ ಪುಲಿಗೆರೆ ಉತ್ಸವದಲ್ಲಿ ಮಾತ್ರ. ಈ ಕಾರ್ಯಕ್ರಮಕ್ಕೆ ಈ ಭಾಗದ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು.

ಏ.19ರಂದು ಬೆಳಿಗ್ಗೆ 6 ಗಂಟೆಗೆ ಪುಲಿಗೆರೆ ಉತ್ಸವ ಕಾರ್ಯಕ್ರಮವನ್ನು ಭಾರತೀಯ ವಿದ್ಯಾಭವನದ ಜಂಟಿನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಉದ್ಘಾಟಿಸಲಿದ್ದಾರೆ. ಸಂಜೆ 4ಕ್ಕೆ ಸೋಮೇಶ್ವರನ ಪಲ್ಲಕ್ಕಿ ಉತ್ಸವ ನೆರವೇರಲಿದೆ. ಮೆರವಣಿಗೆ ಇನ್‌ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕ ಪ್ರಶಾಂತ ಹೆಗಡೆ ಚಾಲನೆ ನೀಡುವರು. ನಿತ್ಯ ಬೆಳಿಗ್ಗೆ 6ರಿಂದ 8 ಗಂಟೆವರೆಗೆ ಉದಯರಾಗ ಮತ್ತು ಸಂಜೆ 6ರಿಂದ 9.30ರವರೆಗೆ ಸಂಧ್ಯಾರಾಗ ಕಾರ್ಯಕ್ರಮಗಳು ಜರುಗಲಿವೆ.

ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್‌ನ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮತ್ತು ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮಾತನಾಡಿ, ಪುರಾತನ ಇತಿಹಾಸ ಹಾಗೂ ಪರಂಪರೆಗೆ ಹೆಸರಾದ ದೇವಸ್ಥಾನವನ್ನು ಡಾ.ಸುಧಾ ನಾರಾಯಣ ಮೂರ್ತಿಯವರು ಕೋಟ್ಯಾಂತರ ರೂ ವೆಚ್ಚದಲ್ಲಿ ಜೀರ್ಣೋದ್ಧಾರಗೊಳಿಸಿ, ದೇವಸ್ಥಾನಕ್ಕೆ ಗತವೈಭವದ ಮೆರಗು ತಂದುಕೊಡಲು ಪ್ರತಿವರ್ಷ ಪುಲಿಗೆರೆ ಉತ್ಸವ ಹೆಸರಿನಲ್ಲಿ ಕಾರ್ಯಕ್ರಮ ಮಾಡುತ್ತಿರುವುದು ನಮಗೆಲ್ಲ ಹೆಮ್ಮೆ. ಈ ವರ್ಷವೂ ಪುಲಿಗೆರೆ ಉತ್ಸವ ಕಾರ್ಯಕ್ರಮದಲ್ಲಿ ಎಲ್ಲರೂ ಪಾಲ್ಗೊಂಡು ಸಂಭ್ರಮಿಸಿಸೋಣ, ಸಹಕರಿಸೋಣ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಭಾರತೀಯ ವಿದ್ಯಾಭವನ ಗೋವಿಂದ ಕುಲಕರ್ಣಿ, ಕುಬೇರಪ್ಪ ಮಹಾಂತಶೆಟ್ಟರ, ಚನ್ನಪ್ಪ ಜಗಲಿ, ಸಿದ್ದನಗೌಡ ಬಳ್ಳೊಳ್ಳಿ, ಮಾಲಾದೇವಿ ದಂದರಗಿ, ಗೀತಾ ಮಾನ್ವಿ, ಸುರೇಶ ರಾಚನಾಯ್ಕರ, ಎಸ್.ಪಿ. ಪಾಟೀಲ, ಸುಮಾ ಚೋಟಗಲ್, ವಿ.ಜಿ. ಪಡಗೇರಿ, ಪೂರ್ಣಾಜಿ ಕರಾಟೆ, ವಿ.ಜಿ. ಪಡಗೇರಿ, ಪ್ರವೀಣ ಬಾಳಿಕಾಯಿ, ನೀಲಪ್ಪ ಕರ್ಜೆಕಣ್ಣವರ, ರಾಘವೇಂದ್ರ ಪೂಜಾರ, ಜಿ.ಎಸ್. ಗುಡಗೇರಿ, ವಿರುಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ, ಮಲ್ಲೇಶಪ್ಪ ಕಣವಿ, ನೀಲಪ್ಪ ಕನವಳ್ಳಿ, ಸೋಮಣ್ಣ ಅಣ್ಣಿಗೇರಿ, ಬಿ.ಎಸ್. ಬಾಳೇಶ್ವರಮಠ, ಈಶ್ವರ ಮೇಡ್ಲೇರಿ, ಡಿ.ಬಿ. ಬಳಿಗಾರ ಮುಂತಾದವರಿದ್ದರು.

# ನರೇಗಾ ಉದ್ಯೋಗ ಚೀಟಿಯ ಮಹತ್ವ ತಿಳಿಯಿರಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಅಂತುರ ಗ್ರಾ.ಪಂ ವ್ಯಾಪ್ತಿಯಲ್ಲಿ ಪ್ರಗತಿಯಲ್ಲಿರುವ ಸಾಮೂಹಿಕ ಬದು ನಿರ್ಮಾಣ ಕಾಮಗಾರಿಗೆ ಗದಗ ಜಿ.ಪಂ ಉಪ ಕಾರ್ಯದರ್ಶಿ ಸಿ.ಬಿ. ದೇವರಮನಿ ಭೇಟಿ ನೀಡಿ ಕಾಮಗಾರಿ ಪರಿಶೀಲನೆ ನಡೆಸಿದರು.

ನರೇಗಾ ಯೋಜನೆಯ 'ವಲಸೆ ಯಾಕ್ರಿ ನಿಮ್ಮೂರಲ್ಲೇ ಉದ್ಯೋಗ ಖಾತ್ರಿ/ಉದ್ಯೋಗ ಖಾತ್ರಿ ದುಡಿಮೆ ಖಾತ್ರಿ' ಎಂಬ ಅಭಿಯಾನದಡಿ ಏಪ್ರಿಲ್ 1ರಿಂದ ಮೇ ಅಂತ್ಯದವರೆಗೆ ನರೇಗಾ ನೋಂದಾಯಿತ ಕೂಲಿಕಾರರಿಗೆ ನಿರಂತರವಾಗಿ ಕೆಲಸ ನೀಡುವ ಬಗ್ಗೆ ಮಾಹಿತಿ ನೀಡಿದರು.

ನರೇಗಾ ಯೋಜನೆಯಡಿ ಪಡೆದ ಉದ್ಯೋಗ ಚೀಟಿಯ ಮಹತ್ವ ತಿಳಿದು, ದೊರೆಯುವ ಸೌಲಭ್ಯವನ್ನು ಪಡೆಯಲು ನಿಯಮಾನುಸಾರ ಕೂಲಿ ಕಾರ್ಮಿಕರು ಕೆಲಸ ನಿರ್ವಹಣೆ ಮಾಡಬೇಕು. ಗಂಡು ಮತ್ತು ಹೆಣ್ಣಿಗೆ ಸಮಾನ ಕೂಲಿ ನೀಡಲಾಗುವುದು. ಅಳತೆಗೆ ತಕ್ಕಂತೆ ಕೆಲಸ ನಿರ್ವಹಣೆ ಮಾಡಿದರೆ ಮಾತ್ರ ಪೂರ್ಣ ಪ್ರಮಾಣದ ಕೂಲಿ ಮೊತ್ತ ಲಭ್ಯವಾಗುತ್ತದೆ ಎಂದು ತಿಳಿಸಿದರು.

2024 ರ ಲೋಕಸಭೆ ಚುನಾವಣೆ ಪ್ರಯುಕ್ತ ಕಾಮಗಾರಿ ಸ್ಥಳದಲ್ಲಿ ಹಾಜರಿದ್ದ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ಮತದಾರರು ಕೂಡ ಮತದಾನ ಮಾಡುವುದು ಅವರ ಆದ್ಯ ಕರ್ತವ್ಯವಾಗಿರುತ್ತದೆ. ಮತದಾನ ಪ್ರಕ್ರಿಯೆಯಿಂದ ಯಾವೊಬ್ಬ ವ್ಯಕ್ತಿಯೂ ಕೂಡ ಹೊರಗುಳಿಯಬಾರದು ಎಂದು ತಿಳಿಸಿದರು.

ಪಿಡಿಓ ಎಚ್.ಎಸ್. ಚಟ್ರಿ ಹಾಜರಿದ್ದ ಸಿಬ್ಬಂದಿಗಳಿಗೆ ಹಾಗೂ ಕೂಲಿಕಾರರಿಗೆ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ತಾ.ಪಂ ಸಹಾಯಕ ನಿರ್ದೇಶಕ ಕುಮಾರ್ ಪೂಜಾರ್, ಜಿ.ಪಂ ನರೇಗಾ ಸಿಬ್ಬಂದಿಗಳಾದ ಎಡಿಪಿಸಿ ಕಿರಣ್ ಕುಮಾರ್, ಡಿಎಮ್‌ಆಯ್‌ಎಸ್ ಮಲ್ಲಿಕಾರ್ಜುನ ಸರ್ವಿ, ಡಿಐಇಸಿ ವಿ.ಎಸ್. ಸಜ್ಜನ ಹಾಗೂ ತಾಲೂಕು ನರೇಗಾ ಸಿಬ್ಬಂದಿ ಟಿ.ಐ.ಇ.ಸಿ ವೀರೇಶ್, ಬಿ.ಎಫ್.ಟಿ ದಾವಲ್ ಮತ್ತು ನರೇಗಾ ಕೂಲಿಕಾರರು ಹಾಜರಿದ್ದರು.



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ತಾಲೂಕಿನ ಬಿದರಹಳ್ಳಿ ಗ್ರಾ.ಪಂ ವ್ಯಾಪ್ತಿಯ ಮುಂಡವಾಡ ಗ್ರಾಮದಲ್ಲಿ ನಡೆದಿರುವ ನರೇಗಾ ಸಮುದಾಯ ಕಾಮಗಾರಿ ಸ್ಥಳದಲ್ಲಿ ಕಡ್ಡಾಯ ಮತದಾನ ಜಾಗೃತಿ ಕಾರ್ಯಕ್ರಮದ ನಿಮಿತ್ತ ಕೂಲಿಕಾರರಿಗೆ ಮತದಾನದ ಮಹತ್ವವನ್ನು ತಿಳಿಸಿ, ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಈ ವೇಳೆ ಟಿ.ಸಿ. ಹರೀಶ ಸೊಬರದ, ಟಿಎಇ, ಅಂಜಿನಪ್ಪ ಮತ್ತು ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

# ಚುನಾವಣಾ ಆಯೋಗಕ್ಕೆ ದೂರು



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಹುಲಕೋಟಿ ಗ್ರಾಮದಲ್ಲಿರುವ ಕೃಷಿ ವಿಜ್ಞಾನ ಕೇಂದ್ರ(ಕೆವಿಕೆ)ವನ್ನು ಕಾಂಗ್ರೆಸ್ ಪಕ್ಷ ದುರಪಯೋಗಪಡಿಸಿಕೆ ೂಳ್ಳುತ್ತಿದ್ದು, ಅದನ್ನು ಕೂಡಲೇ ನಿಲ್ಲಿಸಬೇಕು, ಸಂಸ್ಥೆಯಲ್ಲಿ ಪಕ್ಷ ಸೇರ್ಪಡೆ ಕಾರ್ಯಕ್ರಮ ಮಾಡಿದ್ದರ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಜಿಲ್ಲಾ ಬಿಜೆಪಿ ವತಿಯಿಂದ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ದೂರು ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಶಾಸಕ ಡಾ. ಚಂದ್ರು ಲಮಾಣಿ, ಕಾನೂನು ಪ್ರಕೋಷ್ಠದ ಜಿಲ್ಲಾ ಸಂಚಾಲಕ ಕೆ.ಪಿ. ಕೋಟಿಗೌಡ್ರ, ಎಂ.ಎಂ. ಹಿರೇಮಠ, ರಾಜು ಹೊಂಗಲ, ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾನ, ಪಕ್ಕಿರೇಶ ರಟ್ಟಿಹಳ್ಳಿ, ಅನಿಲ ಅಬ್ಬಿಗೇರಿ, ದತ್ತಣ್ಣ ಜೊಶಿ, ಶ್ರೀನಿವಾಸ ಹುಬ್ಬಳ್ಳಿ, ಮಂಜುನಾಥ ಮುಳಗುಂದ ಮುಂತಾದವರು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಅರವಟ್ಟಿಗೆ ಉದ್ಘಾಟನೆ




**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಬೀದಿ ಬದಿ ವ್ಯಾಪಾರಸ್ಥರ ಸಂಘಟನೆಗಳ ಒಕ್ಕೂಟದಿಂದ ಪ್ರತಿ ವರ್ಷದಂತೆ ಬಜಾರದಲ್ಲಿ ಕುಡಿಯುವ ನೀರಿನ ಅರವಟ್ಟಿಗೆಯನ್ನು ಬೀದಿ ಬದಿ ವ್ಯಾಪಾರಸ್ಥ ಸಂಘದ ಅಧ್ಯಕ್ಷ ಭೀಮಣ್ಣ ಕೋಳಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಬಾರಿ ಬೇಸಿಗೆ ಕಳೆದ ಬಾರಿಗಿಂತ ಹೆಚ್ಚಿದ್ದು, ಮುಳಗುಂದ ಪಟ್ಟಣಕ್ಕೆ ಸುತ್ತ ಮುತ್ತಲಿನ ಗ್ರಾಮದ ಸಾವಿರಾರು ಜನರು ನಿತ್ಯ ವ್ಯಾಪಾರ-ವ್ಯವಹಾರಕ್ಕಾಗಿ ಬರುತ್ತಾರೆ. ಅವರಿಗೆ ಬೇಸಿಗೆ ಸಮಯದಲ್ಲಿ ನೀರಿನ ದಾಹ ಹೆಚ್ಚು ಇರುವುದರಿಂದ ಕುಡಿಯುವ ನೀರಿನ ಅರವಟ್ಟಿಗೆ ದಾಹ ನೀಗಲು ಸಹಕಾರಿಯಾಗುತ್ತದೆ ಎಂದರು.

ಫಕ್ಕೀರಯ್ಯ ಕೆಂಬಾವಿಮಠ, ದೇವೇಂದ್ರಪ್ಪ ಕಳ್ಳಿಮನಿ, ರವಿ ಹಾಳಕೇರಿ, ಮಂಜುನಾಥ ಮುಳಗುಂದ, ರತ್ನವ್ವ ಭಜಂತ್ರಿ, ಲಕ್ಷ್ಮವ್ವ ಕುರಬಗೌಳಿ, ಹೇಮಾ ಭಜಂತ್ರಿ ಹಾಗೂ ಬೀದಿ ಬದಿ ವ್ಯಾಪಾರಸ್ಥರ ಸಂಘಟನೆ ಸರ್ವ ಸದಸ್ಯರು ಇದ್ದರು.

### ಬಿಜೆಪಿ ನಗರ ಘಟಕದ ವಿವಿಧ ಮೋರ್ಚಾಗಳ ಪದಾಧಿಕಾರಿಗಳ ಆಯ್ಕೆ

# ಬಿಜೆಪಿ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಿ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬಿಜೆಪಿ ಪಕ್ಷದ ಪ್ರತಿಯೊಬ್ಬ ಕಾರ್ಯಕರ್ತರು ತಮ್ಮ ಬೂತ್ ಮಟ್ಟದಲ್ಲಿ ಕಠಿಣ ಪರಿಶ್ರಮದಿಂದ ಪಕ್ಷವನ್ನು ಸಂಘಟಿಸಬೇಕು. ಮತದಾರರಲ್ಲಿ ದೇಶದ ಭವಿಷ್ಯ ನಿರ್ಮಾಣ ಮಾಡಲು ಬಿಜೆಪಿ ಪಕ್ಷಕ್ಕೆ ಮತ ನೀಡುವಂತೆ ಮನವಿ ಮಾಡಬೇಕೆಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಅವರು ಶಿರಹಟ್ಟಿ ಪಟ್ಟಣದಲ್ಲಿ ಭಾರತೀಯ ಜನತಾ ಪಕ್ಷದ ನಗರ ಘಟಕದ ವಿವಿಧ ಮೋರ್ಚಾಗಳ ಪದಾಧಿಕಾರಿಗಳ ಆಯ್ಕೆ ಹಾಗೂ ಆದೇಶ ಪತ್ರ ವಿತರಿಸಿ ಮಾತನಾಡಿದರು.


ಮುಂಬರಲಿರುವ ಲೋಕಸಭಾ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರನ್ನು ಅತ್ಯಧಿಕ ಮತಗಳ ಅಂತರದಿಂದ ಗೆಲ್ಲಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಕೈ ಬಲಪಡಿಸಬೇಕು. ಈ ದಿಶೆಯಲ್ಲಿ ಎಲ್ಲ ಪದಾಧಿಕಾರಿಗಳು ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ ಮಾತನಾಡಿ, ನಗರ ಘಟಕದ ಉಪಾಧ್ಯಕ್ಷರಾಗಿ ಸುದೀರ ಜಮಖಂಡಿ, ಸುರೇಶ ಹವಳದ, ಮಂಜುನಾಥ ಸೊಂಟನೂರ, ಅನ್ನಪೂರ್ಣ ಕಟ್ಟೇಕಾರ, ಕಾರ್ಯದರ್ಶಿಗಳಾಗಿ ಅನಿಲ ಪಾಶ್ಚಾಪೂರ, ಸಂತೋಷ ತೋಡೆಕಾರ, ಮಲ್ಲು ಕುದರಿ, ರಾಜು ಮಾತಾಡೆ, ವಿಜಯಲಕ್ಷ್ಮೀ ತಳವಾರ, ಕೋಶಾಧ್ಯಕ್ಷರಾಗಿ ಮಹೇಶ ಕಲ್ಲನವರ, ಮಹಿಳಾ ಮೋರ್ಚಾದ ಅಧ್ಯಕ್ಷರಾಗಿ ರೂಪಾ ಪಾಶ್ಚಾಪೂರ, ಕಾರ್ಯದರ್ಶಿಯಾಗಿ ರೇಖಾ ಭೋರಶೆಟ್ಟರ, ಕಲಾವತಿ ನಾವಿ, ಯುವ ಮೋರ್ಚಾದ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಕಬಾಡಿ, ಪ್ರ.ಕಾರ್ಯದರ್ಶಿಯಾಗಿ ಮಂಜುನಾಥ ರಡ್ಡೇರ, ದೇವು ಪೂಜಾರ, ಓಬಿಸಿ ಮೋರ್ಚಾದ ಅಧ್ಯಕ್ಷರಾಗಿ ಶಿವಾನಂದ ಬಟ್ಟೂರ, ಪ್ರ. ಕಾರ್ಯದರ್ಶಿಯಾಗಿ ಶ್ರೀನಿವಾಸ ಕಪಟಕರ, ವಿನೋದ ಕಪ್ಪತ್ತನವರ, ರೈತ ಮೋರ್ಚಾದ ಅಧ್ಯಕ್ಷರಾಗಿ ಜಗದೀಶ ತೇಲಿ, ಪ್ರ.ಕಾರ್ಯದರ್ಶಿಯಾಗಿ ರವಿ ಬೇಂದ್ರೆ, ಶಿವಪ್ಪ ತಳವಾರ, ಅಲ್ಪಸಂಖ್ಯಾತ ಮೋರ್ಚಾದ ಅಧ್ಯಕ್ಷರಾಗಿ ಅಸ್ಪಾಕ್ ನಗಾರ, ಪ್ರ.ಕಾರ್ಯದರ್ಶಿಯಾಗಿ ಇಸ್ಮಾಯಿಲ್ ಶಿಗ್ಲಿ, ಹಜರತ್‌ಅಲಿ ಇಟಗಿ, ಎಸ್‌ಸಿ ಮೋರ್ಚಾದ ಅಧ್ಯಕ್ಷರಾಗಿ ಶರಣಪ್ಪ ಹರ್ತಿ, ಪ್ರ.ಕಾರ್ಯದರ್ಶಿಯಾಗಿ ರಾಜು ಗಾಮನಗಟ್ಟಿ, ಎಸ್‌ಸಿ ಮೋರ್ಚಾದ ಅಧ್ಯಕ್ಷರಾಗಿ ಬಸವರಾಜ ತಳವಾರ, ಪ್ರ.ಕಾರ್ಯದರ್ಶಿಯಾಗಿ ಮೌನೇಶ ತಳವಾರ, ಸೊಮಶೇಖರ ಕಲಘಟಗಿ ಆಯ್ಕೆಯಾಗಿದ್ದಾರೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಒಬ್ಬ ಸಾಮಾನ್ಯ ಕಾರ್ಯಕರ್ತನಾದ ನನ್ನನ್ನು ಶಾಸಕನನ್ನಾಗಿ ಮಾಡಿದ್ದು ಬಿಜೆಪಿ ಪಕ್ಷ. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಹ ಉನ್ನತ ಹುದ್ದೆಗಳನ್ನು ನೀಡುವ ಏಕೈಕ ಪಕ್ಷ ಬಿಜೆಪಿ ಆಗಿದೆ. ಪಕ್ಷದ ಅಭ್ಯರ್ಥಿಯಾಗಿರುವ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರಿಗೆ ಎಲ್ಲ ಬೂತ್‌ಗಳಲ್ಲಿಯೂ ಅತ್ಯಧಿಕ ಮತಗಳು ಲಭಿಸುವಂತೆ ಪಕ್ಷಕ್ಕೆ ದುಡಿದು, ಅವರನ್ನು ಕೇಂದ್ರದ ಮಂತ್ರಿಯಾಗಿಸಲು ಎಲ್ಲರೂ ಒಗ್ಗಟ್ಟಾಗಿ ಶ್ರಮಿಸೋಣ ಎಂದರು.

ಶಿರಹಟ್ಟಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಜಾನು ಲಮಾಣಿ, ಜಿಲ್ಲಾ ಪ್ರ. ಕಾರ್ಯದರ್ಶಿ ಫಕ್ಕೀರೇಶ ರಟ್ಟಿಹಳ್ಳಿ, ಬಿ.ಡಿ. ಪಲ್ಲೇದ, ಮಹಿಳಾ ಅಧ್ಯಕ್ಷೆ ನಂದಾ ಪಲ್ಲೇದ, ಯಲ್ಲಪ್ಪ ಇಂಗಳಗಿ, ಅಜ್ಜು ಕಪ್ಪತ್ತನವರ, ಶಿವಯ್ಯ ಮಠಪತಿ, ಪ್ರವೀಣಗೌಡ ಪಾಟೀಲ, ಅಕ್ಬರಸಾಬ ಯಾದಗಿರಿ, ಅಶೋಕ ವರವಿ, ಬಸವರಾಜ ವಡವಿ ಮುಂತಾದವರು ಉಪಸ್ಥಿತರಿದ್ದರು.

## ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದ ರಾಹುಲ್ ಗಾಂಧಿ



**■ವಿಜಯಸಾಕ್ಷಿ ಸುದ್ದಿ, ವಯನಾಡ್**

ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬುಧವಾರ ನಾಮಪತ್ರ ಸಲ್ಲಿಸಿದರು.

ರಾಹುಲ್ ಗಾಂಧಿ ಅವರು ತಮ್ಮ ಸಹೋದರಿ ಪ್ರಿಯಾಂಕಾ ಗಾಂಧಿ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಸೇರಿದಂತೆ ಪಕ್ಷದ ಇತರ ಹಿರಿಯ ನಾಯಕರೊಂದಿಗೆ ಚುನಾವಣಾಧಿಕಾರಿಯೂ ಆಗಿರುವ ವಯನಾಡ್ ಜಿಲ್ಲಾಧಿಕಾರಿಗೆ ಇಂದು ನಾಮಪತ್ರ ಸಲ್ಲಿಸಿದರು.

ಇಂದು ಬೆಳಗ್ಗೆ ಹೆಲಿಕಾಪ್ಟರ್ ಮೂಲಕ ವಯನಾಡಿಗೆ ಆಗಮಿಸಿದ ರಾಹುಲ್ ಗಾಂಧಿ, ನಾಮಪತ್ರ ಸಲ್ಲಿಸುವ ಮುನ್ನ ಇಲ್ಲಿನ ಕಲ್ಪೆಟ್ಟಾದಿಂದ ಸಿವಿಲ್ ಸ್ಟೇಷನ್ ವರೆಗೆ ರೋಡ್ ಶೋ ನಡೆಸಿದರು.

ರೋಡ್‌ಶೋ ನಂತರ ಸಾರ್ವಜನಿಕರನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ನಾಯಕ, ರಾಜ್ಯದ ಹೈರೇಂಜ್ ಜಿಲ್ಲೆಯಲ್ಲಿ ಅನೇಕ ಜೀವಗಳನ್ನು ಬಲಿತೆಗೆದುಕೊಂಡಿರುವ ಮಾನವ-ಪ್ರಾಣಿ ಸಂಘರ್ಷ ಸೇರಿದಂತೆ ಎಲ್ಲಾ ವಿಷಯಗಳಲ್ಲೂ ತಾವು ವಯನಾಡಿನ ಜನರೊಂದಿಗೆ ಇರುವುದಾಗಿ ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka